ಸಂಪುಟ : 9 ಸಂಚಿಕೆ 230 ಪುಟ : 4 ಬೆಲೆ: 3.00 ರವಿವಾರ ಅಕ್ಟೋಬರ್ 20 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 230 Pages : 4 Price : 3.00 Sunday October 20 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಪಿಎಸ್ಐ ಅಮಾನತಿಗೆ ಆಗ್ರಹಿಸಿ ಶ್ರೀರಾಮಸೇನೆಯಿಂದ ಲಕ್ಷ್ಮೇಶ್ವರ ಬಂದ್ ಕರೆ | ಮಹಿಳೆಯರು ಸೇರಿ 50ಕ್ಕೂ ಹೆಚ್ಚು ಪ್ರತಿಭಟನಾಕಾರರು ವಶಕ್ಕೆ

# ಲಕ್ಷ್ಮೇಶ್ವರ ಬಂದ್‌ಗೆ ನೀರಸ ಪ್ರತಿಕ್ರಿಯೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಿಎಸ್ಐ ಅಮಾನತ್ತಿಗೆ ಆಗ್ರಹಿಸಿ ಶ್ರೀರಾಮಸೇನೆಯ ಕಾರ್ಯಕರ್ತರು ಶನಿವಾರ ಕರೆ ನೀಡಿದ್ದ ಲಕ್ಷ್ಮೇಶ್ವರ ಬಂದ್‌ಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಯಿತು. ಬೆಳಿಗ್ಗೆಯಿಂದ ಸಾರಿಗೆ ಸಂಚಾರ ಎಂದಿನಂತೆ ಇತ್ತು. ಶಾಲಾ-ಕಾಲೇಜ್‌ಗೆ ತೆರಳುವ ವಿದ್ಯಾರ್ಥಿಗಳಿಗೆ ಹಾಗೂ ಪ್ರಯಾಣಿಕರಿಗೆ ಯಾವುದೆ ತೆ-ಊಂದರೆ ಕಂಡುಬರಲಿಲ್ಲ. ಮಧ್ಯಾಹ್ನ 12 ಗಂಟೆಯವರೆಗೆ ಮುಖ್ಯ ಬಜಾರ್‌ನ ವ್ಯಾಪಾರಸ್ಥರು ಸ್ವಯಂ ಪ್ರೇರಿತರಾಗಿ ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಿದ್ದರು. ಕೆಲವೊಂದಿಷ್ಟು ವ್ಯಾಪಾರಸ್ಥರು ಎಂದಿನಂತೆ ವ್ಯಾಪಾರಕ್ಕೆ ಮುಂದಾದರೂ ಇಡೀ ದಿನದ ವ್ಯಾಪಾರ-ವಹಿವಾಟು, ಸಾರಿಗೆ, ಶಿಕ್ಷಣ ಎಲ್ಲದರ ಮೇಲೆ ಪರಿಣಾಮ ಬೀರಿತು.




ಬಂದ್ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ತಾಲೂಕಾ ದಂಡಾಧಿಕಾರಿಗಳ ಅದೇಶನ್ವಯ ಅ.18ರ ರಾತ್ರಿ 10 ಗಂಟೆಯಿಂದ ಅ.20ರ ಬೆಳಿಗ್ಗೆ 6 ಗಂಟೆಯವರೆಗೆ ಭಾರತೀಯ ನಾಗರಿಕ ಸುರಕ್ಷತಾ ಸಂಹಿತೆ 2023ರ ಕಲಂ.163(144) ಅಡಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿತ್ತು. ಪಟ್ಟಣದಲ್ಲಿ ಯಾವುದೇ ರೀತಿಯ ಬಂದ್, ಪ್ರತಿಭಟನೆ ಹಾಗೂ ಅಹಿತಕರ ಘಟನೆ ನಡೆಯದಂತೆ ನಿಗಾವಹಿಸಲು ಶುಕ್ರವಾರ ರಾತ್ರಿಯೇ ಎಸ್‌ಪಿ ನೇತೃತ್ವದಲ್ಲಿ ಮೂವರು ಡಿವೈಎಸ್‌ಪಿ, 10 ಸಿಪಿಐ, 25ಪಿಎಸ್ಐ, ಕೆಎಸ್‌ಆರ್‌ಪಿ ತುಕಡಿ, ಡಿಆರ್, ಗೃಹ ರಕ್ಷಕರು ಸೇರಿ 300ಕ್ಕೂ ಹೆಚ್ಚು ಸಿಬ್ಬಂದಿಗಳನ್ನು ನಿಯೋಜಿಸಿ ಆಯಕಟ್ಟಿನ ಸ್ಥಳದಲ್ಲಿ ಸಿಸಿ ಕ್ಯಾಮರಾ ಅಳವಡಿಸಲಾಗಿತ್ತು.

ಪೊಲೀಸ್ ಸರ್ಪಗಾವಲಿನ ನಡುವೆಯೇ ಶ್ರೀರಾಮಸೇನೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ರಾಜು ಖಾನಪ್ಪನವರ ನೇತೃತ್ವದಲ್ಲಿ ಜೈ ಶ್ರೀರಾಮ ಎನ್ನುತ್ತಾ ನುಸುಳಿ ಬಂದ ಕಾರ್ಯಕರ್ತರು ಪಿಎಸ್ಐ ವಿರುದ್ಧ ಘೋಷಣೆ ಕೂಗಿ ಪ್ರತಿಭಟನೆಗೆ ಮುಂದಾದರು. ಕೂಡಲೇ ಕಾರ್ಯೋನ್ಮುಖರಾದ ಪೊಲೀಸರು ಶ್ರೀರಾಮಸೇನೆಯ ಕಾರ್ಯಕರ್ತರು ಸೇರಿದಂತೆ 50ಕ್ಕೂ ಹೆಚ್ಚು ಪ್ರತಿಭಟನಾಕಾರರನ್ನು ವಶಕ್ಕೆ ಪಡೆದರು.

ಇದಕ್ಕೂ ಮೊದಲು ಪಟ್ಟಣ ಸಂಪರ್ಕಿಸುವ ಮುಖ್ಯ ಮಾರ್ಗದಲ್ಲಿ ನಾಕಾಬಂದಿ (ಚೆಕ್‌ಪೋಸ್ಟ್) ನಿರ್ಮಿಸಿ ಕಾರು, ಬೈಕ್, ಸರ್ಕಾರಿ ಬಸ್, ಖಾಸಗಿ ವಾಹನಗಳಲ್ಲಿ ಬರಲೆತ್ನಿಸಿದ ಶ್ರೀರಾಮಸೇನೆಯ ಕಾರ್ಯಕರ್ತರನ್ನು ಅಲ್ಲಿಯೇ ವಶಕ್ಕೆ ಪಡೆದುಕೊಳ್ಳುವ ಕಾರ್ಯ ಕೈಗೊಂಡಿದ್ದರು.

▸▸3ನೇ ಪುಟಕ್ಕೆ

> ಲಕ್ಷ್ಮೇಶ್ವರ ಪಟ್ಟಣದಲ್ಲಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಿದ್ದರೂ ಪ್ರತಿಭಟನೆಗಿಳಿದ 50ಕ್ಕೂ ಜನರನ್ನು ವಶಕ್ಕೆ ಪಡೆಯಲಾಗಿದ್ದು, ಕಾನೂನು ಕ್ರಮ ಕೈಗೊಳ್ಳಲಾಗುವುದು. ಪಿಎಸ್ಐ ವಿರುದ್ಧ ಆರೋಪದ ತನಿಖೆಗೆ ಡಿವೈಎಸ್ಪಿ ಅವರನ್ನು ನೇಮಿಸಲಾಗಿದೆ. ಮುಂಜಾಗೃತಾ ಕ್ರಮವಾಗಿ ಪೊಲೀಸ್ ಬಂದೋಬಸ್ತ್ ಮುಂದುವರೆಸಲಾಗಿದೆ.
>
> **– ಬಿ.ಎಸ್. ನೇಮಗೌಡ.**
>
> ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.





### ಬಂದ್‌ನಲ್ಲಿ ಪೊಲೀಸರ ಪಕ್ಷಪಾತ

> ಹಿಂದೂ ವಿರೋಧಿ ನೀತಿ ಅನುಸರಿಸುತ್ತಿರುವ ಲಕ್ಷ್ಮೇಶ್ವರ ಪಿಎಸ್ಐ ಈರಣ್ಣ ರಿತ್ತಿಯವರನ್ನು ಅಮಾನತುಗೊಳಿಸುವಂತೆ ಆಗ್ರಹಿಸಿ ಶನಿವಾರ ನಡೆದ ಲಕ್ಷ್ಮೇಶ್ವರ ಬಂದ್‌ನಲ್ಲಿ ಪೊಲೀಸರು ಕೇವಲ ಶ್ರೀರಾಮ ಸೇನೆಯ ಕಾರ್ಯಕರ್ತರನ್ನು ಮಾತ್ರ ವಶಕ್ಕೆ ಪಡೆಯುವ ಮೂಲಕ ತಾರತಮ್ಯ ನೀತಿಯನ್ನು ಅನುಸರಿಸಿದ್ದಾರೆ. ಪಿಎಸ್ಐ ಈರಣ್ಣ ರಿತ್ತಿ ಪ್ರೇರೇಪಿತ ವ್ಯಕ್ತಿಗಳು ಹಿಂದೂ ಸಂಘಟನೆಗಳ ವಿರುದ್ಧ ಧಿಕ್ಕಾರ ಕೂಗಿದ್ದಾರೆ. ಪೊಲೀಸರು ಕೇವಲ ಶ್ರೀರಾಮ ಸೇನಾ ಕಾರ್ಯಕರ್ತರು, ಹಿಂದೂ ಸಂಘಟನೆಗಳ ಕಾರ್ಯಕರ್ತರನ್ನು ವಶಕ್ಕೆ ಪಡೆದಿದ್ದಾರೆ. ಪೊಲೀಸರು ಮುನ್ನೇಚ್ಚರಿಕೆ ಕ್ರಮವಾಗಿ ವಿಧಿಸಿರುವ ಬಿಎನ್‌ಎಸ್ 163 ಕಲಂ ಕೇವಲ ಹಿಂದೂ ಸಂಘಟನೆಗಳಿಗೆ ಮಾತ್ರ ಅನ್ವಯಿಸುತ್ತದೆಯೇ?
>
> **– ರಾಜೂ ಖಾನಪ್ಪನವರ.**
>
> ಶ್ರೀರಾಮ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ.



## ವಾಲ್ಮೀಕಿ ಜಯಂತಿ ನಾಳೆ

**■ವಿಜಯಸಾಕ್ಷಿ ಸುದ್ದಿ, ರೋಣ**

ಅ.21ರಂದು ಬೆಳಿಗ್ಗೆ 9ಕ್ಕೆ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ ಕಾರ್ಯಕ್ರಮ ಜರುಗಲಿದ್ದು, ಬೆಳಿಗ್ಗೆ 9ಕ್ಕೆ ಪಟ್ಟಣದ ಸಿದ್ದಾರೂಢ ಮಠದಿಂದ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಮದ್ಯಾಹ್ನ 1ಕ್ಕೆ ಗುರುಭವನದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.

ಸಾನ್ನಿಧ್ಯವನ್ನು ಹುಲಿಹೈದರ್ ಪೂಜ್ಯರಾದ ರಾಜಾ ಅಚ್ಯುತ ನಾಯಕ ವಹಿಸಲಿದ್ದು, ಶಾಸಕ ಜಿ.ಎಸ್. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಶಾಸಕ ಸಿ.ಸಿ. ಪಾಟೀಲ ಜ್ಯೋತಿ ಬೆಳಗಿಸುವರು. ಅಧ್ಯಕ್ಷತೆಯನ್ನು ಬಸವರಾಜ ತಳವಾರ ವಹಿಸಲಿದ್ದು, ಮುಖ್ಯ ಅಥಿತಿಗಳಾಗಿ ಪುರಸಭೆಯ ಅಧ್ಯಕ್ಷೆ ಗೀತಾ ಮಾಡಲಗೇರಿ, ಉಪಾಧ್ಯಕ್ಷ ದುರ್ಗಪ್ಪ ಹಿರೇಮನಿ, ಅರಣ್ಯ ನಿಗಮದ ಮಾಜಿ ಅಧ್ಯಕ್ಷ ಟಿ.ಈಶ್ವರ, ಪುರಸಭೆ ಸದಸ್ಯರಾದ ಸಂಗನಗೌಡ ಪಾಟೀಲ, ಸಂತೋಷ ಕಡಿವಾಲ ಸೇರಿದಂತೆ ಅನೇಕ ಮುಖಂಡರುಗಳು ಭಾಗವಹಿಸಲಿದ್ದಾರೆ.

ಡಾ. ಶರಣು ಮುಷ್ಠಿಗೇರಿ ಉಪನ್ಯಾಸ ನೀಡಲಿದ್ದಾರೆ. ಸಮಾಜದ ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ತಾಲೂಕಾಧ್ಯಕ್ಷ ಬಸವರಾಜ ತಳವಾರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ಕನ್ನಡ ರಾಜ್ಯೋತ್ಸವ ಆಚರಣೆ ಕುರಿತ ಪೂರ್ವಭಾವಿ ಸಭೆಯಲ್ಲಿ ಡಿಸಿ ಗೋವಿಂದರೆಡ್ಡಿ

# ರಾಜ್ಯೋತ್ಸವ ಕಾರ್ಯಕ್ರಮ ಅರ್ಥಪೂರ್ಣವಾಗಿರಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ನವೆಂಬರ್ 1ರಂದು ಕನ್ನಡ ರಾಜ್ಯೋತ್ಸವವನ್ನು ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಕನ್ನಡ ರಾಜ್ಯೋತ್ಸವ ಅಚರಣೆಯ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ವರ್ಷದಂತೆ ಈ ವರ್ಷವೂ ಸಹ ಕನ್ನಡ ರಾಜ್ಯೋತ್ಸವದ ದಿನದ ಹಿಂದಿನ ದಿನ ಹಾಗೂ ಕನ್ನಡ ರಾಜ್ಯೋತ್ಸವದ ದಿನದಂದು ಸರ್ಕಾರಿ ಕಚೇರಿ ಹಾಗೂ ನಗರದ ವಿವಿಧ ವೃತ್ತಗಳಲ್ಲಿ ಸ್ವಚ್ಛತೆಯೊಂದಿಗೆ ವಿದ್ಯುತ್ ದೀಪಾಲಂಕಾರಕ್ಕೆ ಕ್ರಮ ಕೈಗೊಳ್ಳಬೇಕು ಎಂದರು.

ಅಂದು ಬೆಳಿಗ್ಗೆ 7.30 ಗಂಟೆಗೆ ಗದಗ-ಬೆಟಗೇರಿ ನಗರಸಭೆ ಪದವಿಪೂರ್ವ ಕಾಲೇಜು ಆವರಣದಿಂದ ತಾಯಿ ಭುವನೇಶ್ವರಿಯ ಮೆರವಣಿಗೆಯು ವಿವಿಧ ವೃತ್ತಗಳಲ್ಲಿ ಸಂಚರಿಸಿ ನಂತರ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ತಲುಪಲಿದೆ. ಬೆ.9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸುವರು. ಕಾರ್ಯಕ್ರಮಕ್ಕೆ ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರಬೇಕು. ನಂತರ ಪೊಲೀಸ್ ಪಡೆ, ಹೋಮ್‌ಗಾರ್ಡ್, ಭಾರತ ಸೇವಾ ದಳಗಳಿಂದ ಪರೇಡ್, ಪಥ ಸಂಚಲನ ಜರುಗಲಿವೆ. ಕಾರ್ಯಕ್ರಮದ ಸ್ಥಳದ ಸ್ವಚ್ಛತೆ ಹಾಗೂ ಅತಿಥಿಗಳಿಗೆ ಆಸನದ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ ಕುರಿತು ಕ್ರಮ ಕೈಗೊಳ್ಳಬೇಕು. ಶಿಷ್ಟಾಚಾರದನ್ವಯ ಅತಿಥಿ ಗಣ್ಯರ ಅಹ್ವಾನ ಹಾಗೂ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.



ವಿವಿಧ ರಂಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಪರಿಣಿತರಿಗೆ ಇದೇ ಸಂದರ್ಭದಲ್ಲಿ ಸನ್ಮಾನಿಸುವ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ನಿರ್ಮಲಾ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ಮಹೇಶ ಪೋತದಾರ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಯುವಜನ ಮತ್ತು ಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ.ಎಲ್. ಬಾರಾಟಕ್ಕೆ, ಲೋಕೋಪಯೋಗಿ ಇಲಾಖೆ ಅಧಿಕಾರಿ ಪಾಟೀಲ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ, ಯಾವುದೇ ಲೋಪಗಳಿಲ್ಲದಂತೆ ಆಚರಿಸಲು ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಸಮಿತಿಯವರು ವಿಶೇಷ ಆಸಕ್ತಿಯಿಂದ ಕೆಲಸ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚಿಸಿದರು.

## ಡಿಕೆಶಿ ಆದಷ್ಟು ಬೇಗ ಸಿಎಂ ಆಗಲಿದ್ದಾರೆ: ಭವಿಷ್ಯ ನುಡಿದ ಶಿವಯೋಗೀಶ್ವರ ಶಿವಾಚಾರ್ಯರು..!

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಡಿಸಿಎಂ ಡಿ.ಕೆ ಶಿವಕುಮಾರ ಅವರನ್ನು ಮುಖ್ಯಮಂತ್ರಿಯನ್ನಾಗಿಸಿ ಅವರಿಂದಲೇ ಲಿಂ.ವೀರ ಗಂಗಾಧರ ಜಗದ್ಗುರುಗಳ ಸಂಕಲ್ಪದಂತೆ ಲಕ್ಷ್ಮೇಶ್ವರ ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ತ್ರಿಕೋಟಿ ಶಿವಲಿಂಗ ಸ್ಥಾಪನಾ ಕಾರ್ಯ ಪೂರ್ಣಗೊಳಿಸಿ ಅವರಿಂದಲೇ ಲೋಕಾರ್ಪಣೆ ಮಾಡಿ ತೋರಿಸುವೆ ಎಂದು ನೊಣವಿನಕೆರೆ ಕಾಡಸಿದ್ದೇಶ್ವರಮಠದ ಕರಿವೃಷಭ ದೇಶೀಕೇಂದ್ರ ಶಿವಯೋಗೀಶ್ವರ ಶಿವಾಚಾರ್ಯರು ಅಚ್ಚರಿಯ ಹೇಳಿಕೆ ನೀಡಿದ್ದಾರೆ.

ಶನಿವಾರ ಮುಕ್ತಿಮಂದಿರದಲ್ಲಿ ನಡೆದ ಲಿಂ.ವೀರ ಗಂಗಾಧರ ಜಗದ್ಗುರುಗಳ 42ನೇ ಪುಣ್ಯಾರಾಧನಾ ಮಹೋತ್ಸವದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಿಂ. ವೀರ ಗಂಗಾಧರ ಜಗದ್ಗುರುಗಳ ಮೇಲೆ ಅಪಾರವಾದ ಭಕ್ತಿ ನಂಬಿಕೆ ಹೊಂದಿರುವ ಡಿ.ಕೆ ಶಿವಕುಮಾರ ನೆನೆಗುದಿಗೆ ಬಿದ್ದಿರುವ ತ್ರಿಕೋಟಿಲಿಂಗ ಸ್ಥಾಪನೆಗೆ ಬೇಕಾಗುವ ಕೋಟ್ಯಾಂತರ ರೂ ಅನುದಾನ ಕಲ್ಪಿಸುವುದಾಗಿ ಹೇಳಿದ್ದರು. ಕಾರಣಾಂತರಗಳಿಂದ ಕೊಂಚ ತಡವಾಗಿ ಇದೀಗ ಮೊದಲ ಹಂತದಲ್ಲಿ 6 ಕೋಟಿ ರೂ ಅನುದಾನ ನೀಡಿದ್ದು ಆದಷ್ಟು ಬೇಗ ಲಿಂ.ಜಗದ್ಗುರುಗಳ ಸಂಕಲ್ಪ ಪೂರ್ಣಗೊಳಿಸೋಣ ಎಂದು ಹೇಳಿದ್ದಾರೆ. ಆದಷ್ಟು ಬೇಗ ಡಿ.ಕೆ ಶಿವಕುಮಾರ ಮುಖ್ಯಮಂತ್ರಿಯಾಗಲಿದ್ದಾರೆ ಎಂಬ ಭವಿಷ್ಯವಾಣಿಯನ್ನು ಡಿಕೆಶಿ ಅವರ ನೆಚ್ಚಿನ ಶ್ರೀಗಳು ನುಡಿದಿದ್ದಾರೆ.

# ಅರ್ಥಪೂರ್ಣ ಕಲಿಕೆಗೆ ಶ್ರಮ ವಹಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿ ಮಗುವೂ ಓದುವ ಪ್ರವೃತ್ತಿಯನ್ನು ಬೆಳೆಸಿಕೊಂಡು ಶುದ್ಧವಾದ ಬರವಣಿಗೆ, ಅರ್ಥಪೂರ್ಣ ಕಲಿಕೆಯಲ್ಲಿ ತನ್ನನ್ನು ತಾನು ತೊಡಗಿಸಿಕೊಳ್ಳುವಂತಾಗಲು ಶಿಕ್ಷಕರು ಪಾಠದ ಉದ್ದೇಶವನ್ನರಿತುಕೊಂಡು ಪೂರ್ವ ತಯಾರಿಯೊಂದಿಗೆ ಅರ್ಥಪೂರ್ಣ ಕಲಿಕೆಯಾಗಲು ಶ್ರಮಿಸಬೇಕು. ಶಿಕ್ಷಕರಿಗೆ ಸೂಕ್ತ ಮಾರ್ಗದರ್ಶನ, ಬೆಂಬಲ ನೀಡಲು ನಾವೆಲ್ಲ ತಂಡವಾಗಿ ಕೆಲಸ ನಿರ್ವಹಿಸೋಣ ಎಂದು ಶಾಲಾ ಶಿಕ್ಷಣ ಇಲಾಖೆಯ ನೂತನ ಉಪ ನಿರ್ದೇಶಕರಾದ ಆರ್.ಎಸ್. ಬುರಡಿ ಹೇಳಿದರು.

ಅವರು ಶನಿವಾರ ನಡೆದ ಶೈಕ್ಷಣಿಕ ಗುಣಮಟ್ಟ ಸುಧಾರಣೆಗಾಗಿ ಮಾರ್ಗದರ್ಶನ, ಮೇಲ್ವಿಚಾರಣಾ ಅಧಿಕಾರಿಗಳ ಪ್ರಗತಿ ಪರಿಶೀಲನೆ ಹಾಗೂ ಶೈಕ್ಷಣಿಕ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಡಯಟ್ ಪ್ರಾಂಶುಪಾಲ ಜಿ.ಎಲ್. ಬಾರಾಟಕ್ಕೆ ಮಾತನಾಡಿ, ಶಾಲಾ ಶಿಕ್ಷಣದ ದೃಷ್ಟಿಕೋನದಲ್ಲಿ-ಹೊಸ ಶೈಕ್ಷಣಿಕ ರಚನೆ, ಪ್ರಮುಖ ಆವಿಷ್ಕಾರಗಳು, ಪಠ್ಯಕ್ರಮ ಇನ್ನೂ ಹಲವಾರು ಬದಲಾವಣೆಗಳು ಆಗುತ್ತಿವೆ. ಅದರಂತೆ ನಾವು ಸಹಿತ ಪುನಶ್ಚೇತನಗೊಂಡು ಗುಣಮಟ್ಟ ಶಿಕ್ಷಣಕ್ಕಾಗಿ ಬದ್ಧರಾಗೋಣ ಎಂದರು.




ಇನ್ನೊರ್ವ ಸಂಪನ್ಮೂಲ ವ್ಯಕ್ತಿ ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಮಾತನಾಡಿ, 6ರಿಂದ 14 ವರ್ಷದ ಮಕ್ಕಳು 8 ವರ್ಷದ ಶಿಕ್ಷಣ ಪಡೆಯುವುದು ಕಡ್ಡಾಯ. ಶಿಕ್ಷಣ ಹಕ್ಕು ಕಾಯಿದೆಯ ಮುಖ್ಯ ಉದ್ದೇಶಗಳು ಭಾರತದಲ್ಲಿನ ಪ್ರತಿಯೊಂದು ಮಗುವು ಅವರ ಜಾತಿ, ಮತ, ಲಿಂಗ ಮತ್ತು ಸಾಮಾಜಿಕ ಆರ್ಥಿಕ ಸ್ಥಿತಿಯನ್ನು ಲೆಕ್ಕಿಸದೆ ಗುಣಮಟ್ಟದ ಶಿಕ್ಷಣವನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳುವುದಾಗಿದೆ ಎಮದರು.

ಪಿಎಂ ಪೋಷಣ ಅಭಿಯಾನದ ಸಹಾಯಕ ನಿರ್ದೇಶಕ ಶಂಕರ ಹಡಗಲಿ, ನಿವೃತ್ತ ಉಪ ನಿರ್ದೇಶಕ ಎಂ.ಎ. ರಡ್ಡೇರ ಮಾತನಾಡಿದರು. ಕಾರ್ಯಾಗಾರದಲ್ಲಿ ಜಿಲ್ಲೆಯ ಎಲ್ಲಾ ತಾಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಮಗ್ರ ಶಿಕ್ಷಣ ಅಧಿಕಾರಿಗಳು, ಪಿಎಂ ಪೋಷಣ ಅಭಿಯಾನದ ಜಿಲ್ಲಾ ಶಿಕ್ಷಣಾಧಿಕಾರಿಗಳು, ಡಯಟ್ ಉಪನ್ಯಾಸಕರು, ಕ್ಷೇತ್ರ ಸಮನ್ವಯಾಧಿಕಾರಿಗಳು, ಅಕ್ಷರದಾಸೋಹ ಸಹಾಯಕ ನಿರ್ದೇಶಕರು, ಸಿಆರ್‌ಪಿ, ಬಿಆರ್‌ಪಿ, ಇಸಿಓ, ಎಪಿಸಿಓ ಹಾಜರಿದ್ದರು.

ಸರೋಜಿನಿ ಬಂಡಿವಡ್ಡರ ಪ್ರಾರ್ಥಿಸಿದರು. ಡಿವೈಪಿಸಿ ಅಧಿಕಾರಿ ಕಂಬಳಿ ಸ್ವಾಗತಿಸಿದರು. ಎಂ.ಎ. ಯರಗುಡಿ ನಿರೂಪಿಸಿದರು. ಎಂ.ಎಚ್. ಸವದತ್ತಿ ವಂದಿಸಿದರು.

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ
–ಸುಭಾಷಿತ

## ಸಂಪಾದಕೀಯ

# ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆಯೇ ಅವ್ಯವಸ್ಥೆ

ಗ್ರಾಮೀಣ ಭಾಗದ ಜನರಿಗೆ ಅವರ ಬೇಕು ಬೇಡಿಕೆಗಳಿಗೆ ಅಲಿಯೇ ಪರಿಹಾರ ಸಿಗಬೇಕು ಎನ್ನುವ ಕಾರಣಕ್ಕಾಗಿ ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆಯನ್ನ ಜಾರಿಗೊಳಿಸಲಾಯಿತು. ಗ್ರಾಮ ಪಂಚಾಯಿತಿಯಿಂದ ಹಿಡಿದು ಜಿಲ್ಲಾ ಪಂಚಾಯಿತಿವರೆಗೆ ಮೂರು ಸ್ಥರದ ಆಡಳಿತ ವಿಕೇಂದ್ರೀಕರಣದ ವ್ಯವಸ್ಥೆ ಮೂಲಕ ಗ್ರಾಮೀಣ ಭಾಗದ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಅತ್ಯುತ್ತಮವಾದ ಕಲ್ಪನೆ ಜಾರಿಗೊಂಡಿತು.

ಆದರೆ ಇವತ್ತು ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆಯೆ ಅವ್ಯವಸ್ಥೆಗೆ ಸಾಕ್ಷಿಯಾಗಿದೆ. ಯಾವ ಉದ್ದೇಶಕ್ಕೆ ಮೂರು ಸ್ಥರದ ವಿಕೇಂದ್ರೀಕರಣ ವ್ಯವಸ್ಥೆಯನ್ನು ಜಾರಿಗೊಳಿಸಲಾಯಿತೊ, ಆ ವ್ಯವಸ್ಥೆಯನ್ನ ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸರ್ಕಾರವೇ ಮುಂದಾಗುತ್ತಿಲ್ಲ.


ಒಂದು ಕಡೆ ಪಂಚಾಯತ್ ರಾಜ್ ವ್ಯವಸ್ಥೆ ಮತ್ತಷ್ಟು ಬಲಗೊಳ್ಳುವ ಕಾನೂನುಗಳನ್ನ ಜಾರಿಗೊಳಿಸಲು ಸರ್ಕಾರ ಮುಂದಾದರೆ, ಮತ್ತೊಂದು ಕಡೆ ಸಕಾಲದಲ್ಲಿ ಚುನಾವಣೆಗಳನ್ನು ನಡೆಸದೆ ಆ ಕಾನೂನುಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಅಡ್ಡಗಾಲ ಹಾಕುವ ಪ್ರಯತ್ನ ಮಾಡುತ್ತದೆ.

ಇದಲ್ಲದರ ಮಧ್ಯೆ ಗ್ರಾಮ ಪಂಚಾಯಿತಿ ವ್ಯವಸ್ಥೆಯು ಸಮರ್ಪಕವಾಗಿ ಕೆಲಸ ಮಾಡುತ್ತಿಲ್ಲ ಎಂದು ಖುದ್ದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಅಸಮಾಧಾನ ಹೊರಹಾಕಿದ್ದಾರೆ. ಪಂಚಾಯಿತಿ ಮಟ್ಟದಲ್ಲಿ ಪರಿಣಾಮಕಾರಿ ಅನುಷ್ಠಾನ ಸಂಬಂಧ ಇದೇ ಮೊದಲ ಬಾರಿಗೆ ಗ್ರಾಮ ಪಂಚಾಯಿತಿ ಮಟ್ಟದ ನೌಕರರ ಮತ್ತು ಸದಸ್ಯರ ಸಮ್ಮೇಳನವನ್ನು ಆಯೋಜಿಸಿ, ಆಡಳಿತಕ್ಕೆ ಚುರುಕು ನೀಡುವ ಪ್ರಯತ್ನ ಮಾಡಿದ್ದಾರೆ. ಆದರೆ ಆ ಸಭೆಯಲ್ಲಿ ಸಚಿವರ ಮಾತಿಗೆ ಯಾವುದೇ ಬೆಲೆ ಇಲ್ಲ ಎನ್ನುವುದಕ್ಕೆ ಅನೇಕ ನಿದರ್ಶನಗಳು ಕಂಡಿವೆ.

ಒಟ್ಟರೆ ಅಧಿಕಾರ ವಿಕೇಂದ್ರೀಕರಣದಿಂದ ಜನರ ಸಮಸ್ಯೆಗಳಿಗೆ ನಿರೀಕ್ಷಿತ ಮಟ್ಟದಲ್ಲಿ ಪರಿಹಾರ ದೊರೆಕಿಸುವ ಬದಲು, ವ್ಯಾಪಕ ಭ್ರಷ್ಟಾಚಾರಕ್ಕೆ ಕಾರಣವಾಗಿದ್ದಂತು ನಿಜ.

## ಅ. 20ರಂದು ಪುಸ್ತಕ ಲೋಕಾರ್ಪಣೆ ನಿಮಿತ್ತ ಪರಿಚಯ ಲೇಖನ

# ಹೂ ಮನದ ಸ್ವಾಭಿಮಾನಿ ಹಜರೇಸಾಬ









ಜೀವಪರ್ಯಂತ ಸಂಕಷ್ಟಗಳ ಸರಮಾಲೆಯನ್ನೇ ಧರಿಸಿದರೂ ಜೀವನ್ಮುಖಿಯಾಗಿ 'ಬದುಕು ಛಂದ ಗೀತ'ವಾಗಿಸಲು ಅಕ್ಷರಶಃ ಪ್ರಯತ್ನಪಟ್ಟವರು ನನ್ನ ನೆಚ್ಚಿನ ನೇಹಿಗ ಕವಿ, ಕತೆಗಾರ, ಕ್ಷೇತ್ರ ಶಿಕ್ಷಣಾಧಿಕಾರಿ, ಉಪನ್ಯಾಸಕ ಹಜರೇಸಾಬ ಬಿ.ನದಾಫ್‌ರವರು. ಮುಗ್ಧ ಮಗುವಿನ ಮನಸು, ದಮನಿ ದಮನಿಯಲಿ ಭ್ರಾತೃತ್ವದ ಸೆಲೆ ಉಕ್ಕುತ್ತಿತ್ತು. ಅಲ್ಲಾಹ–ಅಲ್ಲಮ ಒಂದೇ ಎನ್ನುವ ಬಲವಾದ ನಂಬಿಕೆ ಇಟ್ಟುಕೊಂಡ ಸ್ನೇಹ ಜೀವಿ, ಭಾವುಕ ಜೀವಿ.

ಸವಣೂರು ಲಾಲಶಾ ಕಟ್ಟಾದ ಅಪ್ಪಟ ಅಪರಂಜಿ. ವಿದ್ಯಾಭಾರತಿ ಪ್ರೌಢಶಾಲೆ, ಮಸ್ಜೀದ ಕಾಲೇಜಗಳೆಂದರೆ ಅವರ ಪಾಲಿನ ಜ್ಞಾನಕಾಶಿ. ಐತಿಹಾಸಿಕ ದೊಡ್ಡ ಹುಣಸೆಮರದ ನೆರಳು ಹಜರೇಸಾಬರ ಬೋಧಿವೃಕ್ಷ. ಹುಲಗೂರ ಹಜರೇಶಾ ಖಾದ್ರಿ, ಶಿಶುನಾಳ ಶರೀಫರ ಗದ್ದುಗೆ, ಹುರುಳುಕುಪ್ಪಿ ಛಿಲ್ಲಾ (ಗವಿ) ಪವಿತ್ರ ನೆಚ್ಚಿನ ಧಾರ್ಮಿಕ ಕ್ಷೇತ್ರಗಳು. ಮೋತಿ ತಲಾಬ್‌ನ ಹುಣ್ಣಿಮೆ ಹಜರೇಸಾಬರಿಗೆ ದಾಲ ಸರೋವರದಂತೆ ಗೋಚರಿಸುತ್ತಿತ್ತು.

ಹಜರೇಸಾಬರ ತಂದೆ ಬಾಬುಸಾಬ, ಬಾಬುದಾ, ಪೇಡೆಬಾಬಾ ಎಂದೇ ಖ್ಯಾತರು. ತಂದೆಯಿಂದ ಬಳುವಳಿಯಾಗಿ ಬಂದ ಬೆವರ ಬಿಂದುಗಳನ್ನು ಪೋಣಿಸಿಕೊಂಡು ತಲೆಯ ಮೇಲೆ ಚಿಮಣಿ ಕಟ್ಟಿಕೊಂಡು ಬಗಲಲ್ಲಿ ಅಲ್ಲಿಪಾಕ್ ಪೇಡೆ ಮಾರುವುದೆಂದರೆ ಯುವಕ ಹಜರೇಸಾಬರಿಗೆ ಎಲ್ಲಿಲ್ಲದ ಹಿಗ್ಗು. ಕುಟುಂಬದ ನಿರ್ವಹಣೆಗಾಗಿ ತಂದೆ–ತಾಯಿ ದಾದಿ ನಾನಿಯರಿಗೆ ಹೆಗಲೇಣಿಯಾಗಿ ಮಂದ ಬೆಳಕಿನಲಿ ಪಠ್ಯಪುಸ್ತಕಗಳ ಪ್ರತಿ ಅಕ್ಷರಗಳನ್ನು ಎದೆಗಿಳಿಸಿಕೊಂಡ ಜಾಣ ವಿದ್ಯಾರ್ಥಿ.

ಹೂ ಮನದ ಸ್ವಾಭಿಮಾನಿ ಗೆಳೆಯನನ್ನು ಸಮಾಜ ಅರ್ಥ ಮಾಡಿಕೊಳ್ಳಲು ಸೋತಿತು. ಸಮಾಜಮುಖಿ ಚಿಂತನೆಗಳೇ ಅವರ ಬದುಕಿಗೆ ಎರವಾದವು. ಬಡತನದ ಕಾರಣಕ್ಕೆ ಅಕ್ಷರ ವಂಚಿತ ನಿರ್ಲಕ್ಷಿತ ಮುಸ್ಲಿಂ ಸಮುದಾಯದ ಹಿನ್ನಲೆ ಅವರ ಬೆಳವಣಿಗೆಗೆ ತೊಡಕಾಗಿದ್ದವು. ಚಾಲೆಂಜ್ ಸ್ವೀಕಾರ ಮಾಡಿ ಪ್ರಗತಿಯ ಮೆಟ್ಟಿಲು ಹತ್ತಿದರು. ಹವಾಯಿ ಚಪ್ಪಲಿ ಧರಿಸುವ ಕಾರಣಕ್ಕೆ ನದಾಫ್ ಅವರಿಗೆ ವಿದ್ಯಾಭಾರತಿ ಪ್ರೌಢಶಾಲೆಯಲ್ಲಿ ಶಿಕ್ಷಕರ ಹುದ್ದೆಗೆ ಆಯ್ಕೆ ಮಾಡಿಕೊಳ್ಳಲಿಲ್ಲ. ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಡಾ. ಜಿ.ಕೆ. ದೇವಾಡಿಗ ಅವರು ಯಾಕೆ ನಮ್ಮ ಹುಡುಗನಿಗೆ ಆಯ್ಕೆ ಮಾಡಿಕೊಳ್ಳುವದಿಲ್ಲ ಎಂದು ತಕರಾರು ಮಾಡಿದರು. ಒಂದಲ್ಲ ಮೂರು ಬಾರಿ ಆಡಳಿತ ಮಂಡಳಿ ನದಾಫ್ ಅವರಿಗೆ ಸಂದರ್ಶನ ನಡೆಸಿತ್ತು. ಅನಿವಾರ್ಯವಾಗಿ ಮೋಹನ ಮೆಣಸಿನಕಾಯಿಯವರು ನದಾಫ್‌ರನ್ನು ಆಯ್ಕೆ ಮಾಡಿಕೊಂಡರು.

ಬರವಣಿಗೆ, ಓದು, ಕನ್ನಡ, ಸಾಹಿತ್ಯ ಪರಿಷತ್ತಿನ ಸಂಘಟನೆ ಮಾಡಿದ್ದು ಇತಿಹಾಸ. ಬಿಡುವಿದ್ದಾಗಲೆಲ್ಲ ಗೆಳೆಯ ನದಾಫ್‌ರಿಗಾಗಿ ಕನ್ಯಾನ್ವೇಷಣೆಗೆ ಸಮಯ ಹೊಂದಿಸಿಕೊಳ್ಳುವ ಸಾಹಸಕ್ಕೂ ಕೈಹಾಕಿದ್ದೆವು. ಅವಿಭಜಿತ ಧಾರವಾಡ ಜಿಲ್ಲೆಯ ಸಾಹಿತ್ಯ ವಲಯ ಅವರ ಗೆಳೆಯರಾಗಿದ್ದರು.

ನಾನು ಸೇವೆ ಸಲ್ಲಿಸುತ್ತಿರುವ ಸ್ಥಳಗಳಿಗೆ ನನ್ನ ಭೇಟಿಗೆ ಆಗಾಗ ಬರುತ್ತಿರುವದು. ಎಸ್.ಎಸ್.ಎಲ್.ಸಿ. ಪರೀಕ್ಷೆ ಸ್ಕ್ವಾಡ್ ಅಧಿಕಾರಿಗಳಾಗಿ ಪ್ರತಿ ವರ್ಷ ಗದಗ ಜಿಲ್ಲೆಗೆ ಬರುವದು. ವಾರಾನುಗಟ್ಟಲೆ ನಮ್ಮ ಭೇಟಿ, ಮಾತುಕಥೆಗಳ ವಿನಿಮಯ ನಡೆಯುತ್ತಿತ್ತು. ಅವರ ಹೊಸ ಕವಿತೆಯ ಮೊದಲ ಓದುಗ ನಾನಾಗಿರುತ್ತಿದ್ದೆ. ಸಂಬಂಧದ ಕೊಂಡಿಗಳು ಕಳಚದಂತೆ ವಹಿಸುವ ಎಚ್ಚರಿಕೆ ಅವರಿಗೆ ಈಟಿಯಂತೆ ತಿವಿಯುತ್ತಿದ್ದವು.

ಒಂದೂವರೆ ವರ್ಷದಲ್ಲಿ ಕನ್ನಡ ಹಿಂದಿ ಭಾಷೆಗಳ 98 ಚಲನಚಿತ್ರಗಳನ್ನು ಈರ್ವರೂ ಸೇರಿ ನೋಡಿದ್ದೇವೆಂದರೆ ಇಂದಿಗೂ ನನ್ನ ಊಹೆಗೆ ನಿಲುಕುತ್ತಿಲ್ಲ. ನಮ್ಮೀರ್ವರ ಗೆಳೆತನಕ್ಕೀಗ ಬೆಳ್ಳಿ ಹಬ್ಬದ ಸಂಭ್ರಮ. ಆದರೆ ವಿಧಿಯ ಆಟ ಬೆಳ್ಳಿ ಹಬ್ಬದ ಸಂಭ್ರಮ ಸಂಭ್ರಮಿಸಲು ಕವಿಮಿತ್ರ ಹಜರೇಸಾಬ ನದಾಫ ಇಲ್ಲ.

ಇಬ್ಬರ ಬರವಣಿಗೆ, ಸಾಹಿತ್ಯ ಸಂಘಟನೆ, ಪುಸ್ತಕ ಮುದ್ರಣ, ಬಿಡುಗಡೆ, ಸಭೆ ಸಮಾರಂಭ ಪ್ರತಿ ಬರವಣಿಗೆಯ ಸಾಲು–ಸಾಲಿಗೂ ಚರ್ಚೆ ಮಾಡುವ ರೀತಿ ಇಬ್ಬರಿಗೂ ಬೆರಗು ಹುಟ್ಟಿಸುವ ರೀತಿಯಲ್ಲಿತ್ತು. ಈ ನಡುವೆ 2001ರಲ್ಲಿ ನನಗೆ ಅಂತರ್‌ಜಿಲ್ಲಾ ವರ್ಗಾವಣೆಯಾಗಿ ಹಾವೇರಿಯ ಹೊಕ್ಕಳುಬಳ್ಳಿ ಕತ್ತರಿಸಿಕೊಂಡು ಬಂದರೂ ಸ್ನೇಹದ ಬಳ್ಳಿ ಚಿಗುರುತ್ತಲೇ ಇತ್ತು.

ಗೆಳೆಯ ನದಾಫರು ನಮ್ಮನ್ನಗಲಿದ ಎರಡು ವರ್ಷಗಳ ತರುವಾಯ ಅವರ ಕವಿತೆಗಳನ್ನು ಒಟ್ಟುಗೂಡಿಸಿ ಪ್ರಕಟಿಸಬೇಕೆಂಬ ಮಹದಾಸೆ ಚಿಗುರಿದೆ. ಅಂತೆಯೇ ತಸ್ಮೀನ್ ಪ್ರಕಾಶನದ ಅಡಿಯಲ್ಲಿ 'ಬದುಕು ಛಂದ ಗೀತ' ಮತ್ತು 'ನಕ್ಷತ್ರ ದಾರಿ' ಸಂಕಲನಗಳು ಪ್ರಕಟಣೆ ಮಾಡುವ ಪ್ರಯತ್ನಕ್ಕೆ ಶ್ರೀಮತಿ ಸಬೀನಾ ಅವರ ಸಹಕಾರ, ನದಾಫರವರ ಕುಟುಂಬದವರ ಒತ್ತಾಸೆ ಕೂಡ ಕಾರಣ.

ಪುಂಡಲೀಕ ಕಲ್ಲಿಗನೂರ ನದಾಫ್‌ರ ಓದಿನ ಹಸಿವು ತಣಿಸಿದರು. ಉನ್ನತ ಹುದ್ದೆಗೆ ಅನಿವಾರ್ಯವಾಗಿ ಕಠಿಣ ಶ್ರಮ ಹಾಕಲು ಒತ್ತಾಯ ಮಾಡಿದರು. ನಾನು ಸನ್ 1999ರಲ್ಲಿ ಸವಣೂರ ಕೋರ್ಟನಲ್ಲಿ ಕೆಲಸಕ್ಕೆಂದು ಸೇರಿದೆ. ಹಿರಿಯ ಸಹೋದರ, ಚಿತ್ರಕಲಾವಿದ ಪುಂಡಲೀಕ ಕಲ್ಲಿಗನೂರ, ಉಪನ್ಯಾಸಕ ಎಂ.ಡಿ. ವಕ್ಕುಂದ, ವಿಮರ್ಶಕಿ ಡಾ. ವಿನಯಾ ನಾಯಕ, ಪತ್ರಕರ್ತ ಎಂ. ಮಂಜುನಾಥ ಬಮ್ಮನಕಟ್ಟಿ ಮುಂತಾದ ನನ್ನ ಚಿರಪರಿಚಿತ ವಲಯವೂ ಗೆಳೆಯ ಹಜರೇಸಾಬರನ್ನು ಸ್ನೇಹದ ಸಂಕೋಲೆಯಲ್ಲಿ ಬಂಧಿಸಿತ್ತು.

2021ರ ಮಾರ್ಚ 27ನೇ ತಾರೀಖು ಹಾವೇರಿಯ ಹಂಚಿನಮನಿ ಆರ್ಟ್ ಗ್ಯಾಲರಿಯಲ್ಲಿ ನನ್ನ 'ಪ್ಯಾರಿಪದ್ಯ' ಪುಸ್ತಕ ಬಿಡುಗಡೆ ಸಮಾರಂಭಕ್ಕೆ ನದಾಫ ಸರ್ ಸಾಕ್ಷಿಯಾಗಿದ್ದರು. ಅಂದು ಅವರ ಕೃತಿಯ ಲೋಕಾರ್ಪಣೆಯೆಂದೇ ಭಾವಿಸಿ, ಸಂಭ್ರಮಪಟ್ಟು, ತಬ್ಬಿಕೊಂಡು ಶುಭಹಾರೈಸಿದ್ದರು. ಅಂದಿನ ದಿನ ಅವರ ಸಹೋದರಿಯ ಮನೆಯಲ್ಲಿನ ವಿಶೇಷ ಕಾರ್ಯಕ್ರಮಕ್ಕೆ ಗೈರುಹಾಜರಿಯಾಗಿದ್ದು ನಮ್ಮೀರ್ವರ ಗಾಢವಾದ ಗೆಳೆತನಕ್ಕೆ ಸಾಕ್ಷಿಯಾಗಿತ್ತು.

2021ರ ಜೂನ್ ತಿಂಗಳಲ್ಲಿ ಕರೋನಾ ಮಹಾಮಾರಿ ಪ್ರೇಮಮಯಿ, ಆದರ್ಶಶಿಕ್ಷಕ, ಉಪನ್ಯಾಸಕ ಹಜರೇಸಾಬರಿಗೆ ವಕ್ಕರಿಸಿಕೊಂಡಿತು. ಆಸ್ಪತ್ರೆಯಲ್ಲಿ ತೀವ್ರ ನಿಗಾ ಘಟಕದಲ್ಲಿದ್ದರೂ ವಾಟ್ಸಪ್ ಮೆಸೇಜ್‌ಗಳ ಆವಕ–ಜಾವಕವಿತ್ತು. ಆರೋಗ್ಯದ ಬಗ್ಗೆ, ಭವಿಷ್ಯದ ಬಗ್ಗೆ ಸದಾ ನನಗೆ ಎಚ್ಚರಿಸುತ್ತಲೇ ನದಾಫರು ವಿಧಿಯ ಅಟ್ಟಹಾಸದೆದುರು ಕೊನೆಯ ಉಸಿರು ಚೆಲ್ಲಿದರು.

ಸಾಹಿತ್ಯ ಲೋಕ, ಕುಟುಂಬ, ಒಡನಾಡಿಗಳಿಗೆಲ್ಲರಿಗೂ ಅಕ್ಷರಶಃ ತಬ್ಬಲಿತನ ಕಾಡುತ್ತಿದೆ. ಕವಿಗೆ ಸಾವಿದೆ, ಕವಿ ಬರೆದ ಕವಿತೆಗಳಿಗೆ ಸಾವಿಲ್ಲವೆನ್ನುವುದು ನಿತ್ಯಸತ್ಯ. 2018ರಲ್ಲಿ ಅವರ ಸ್ವರಚಿತ ಕವನ ಸಂಕಲನ 'ಬದುಕು ಛಂದ ಗೀತ' ಮತ್ತು 'ನಕ್ಷತ್ರದಾರಿ' ಸಂಕಲನಗಳು ಮುದ್ರಣಗೊಳ್ಳಬೇಕಾಗಿತ್ತು. ವರ್ಗಾವಣೆ, ಪದೋನ್ನತಿ, ಕೌಟುಂಬಿಕ ಸಮಸ್ಯೆಗಳು ಪುಸ್ತಕ ಬಿಡುಗಡೆಗೆ ತೊಡಕಾಗಿದ್ದವು.

ತಾನೊಂದು ಬಗೆದರೆ ದೈವವೊಂದು ಬಗೆದಿತ್ತು. ಅಕ್ಕರೆಯ ಮಕ್ಕಳಾದ ತಸ್ಮೀನ್, ದಿಯಾ, ಧರ್ಮಪತ್ನಿ ಶ್ರೀಮತಿ ಸಬೀನಾಬಾನು, ತಾಯಿ, ಸಹೋದರ, ಸಹೋದರಿಯರು, ಗೆಳೆಯರು, ವಿದ್ಯಾರ್ಥಿ ಸಮೂಹ ನದಾಫ್‌ರ ಅಗಲಿಕೆಯ ನೋವಿನ ಬಾಧೆಯಿಂದ ಇನ್ನೂ ಹೊರಬಂದಿಲ್ಲ.

ಮುಂದಿನ ದಿನಮಾನಗಳಲ್ಲಿ ಗೆಳೆಯರ, ಕುಟುಂಬದ ಸದಸ್ಯರ ಸಹಕಾರದೊಂದಿಗೆ 'ಹಜರೇಸಾಬ ಬಿ. ನದಾಫ ಸಾಹಿತ್ಯ ಪ್ರತಿಷ್ಠಾನ' ಆರಂಭಿಸುವ ಚಿಂತನೆ ಕೂಡ ಆತ್ಮೀಯ ಗೆಳೆಯರಲ್ಲಿ ಚರ್ಚೆಯಾಗುತ್ತಿದೆ. ಅವರ ಅಪ್ರಕಟಿತ ಬರಹಗಳನ್ನು ಒಂದೆಡೆ ಸೇರಿಸಿ ಪ್ರಕಟಿಸುವ ಇರಾದೆ ಇದೆ.

ಕನ್ನಡ ಸಾಹಿತ್ಯ ಲೋಕ ಅಗಲಿದ ಚೇತನ ಹಜರೇಸಾಬ ಬಿ.ನದಾಫರ ಕಾವ್ಯವನ್ನು ಆಸ್ವಾದಿಸುತ್ತಾರೆಂಬ ಆತ್ಮವಿಶ್ವಾಸದೊಂದಿಗೆ ಅವರ ಆತ್ಮಕ್ಕೆ ಶಾಂತಿಯನ್ನು ಕೋರುವೆ.

**– ಎ. ಎಸ್. ಮಕಾನದಾರ**
**ನಿರಂತರ ಪ್ರಕಾಶನ, ಗದಗ**

# 'ಶರಣ ಸಂಗಮ' ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಅ.20ರಂದು ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1616ನೇ ಶರಣ ಸಂಗಮದಲ್ಲಿ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ 6ನೇ ಸ್ಮರಣೋತ್ಸವ ಹಾಗೂ ವಚನ ಚಿಂತನೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆಯ ಕಾರ್ಯದರ್ಶಿ ಶರಣ ಶಿವನಗೌಡ ಬಿ.ಗೌಡರ, ಉಪನ್ಯಾಸ ಮಾಡುವರು. ಶರಣೆ ರೇಣುಕಾ ವಿ.ಕರೇಗೌಡ್ರ ವಚನ ಚಿಂತನೆ ಮಾಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.



ಎಸ್‌ಬಿಐ ಆರ್‌ಸೆಟಿ ಗದಗ ಸಂಸ್ಥೆಯ ಡಿಎಲ್‌ಆರ್‌ಎಸಿ ಸೆಪ್ಟೆಂಬರ್ 2024 ರ ತ್ರೈಮಾಸಿಕ ಸಭೆಯು ಶುಕ್ರವಾರ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರ ಅಧ್ಯಕ್ಷತೆಯಲ್ಲಿ ಜರುಗಿತು. ಸಭೆಯಲ್ಲಿ ಎಸ್‌ಬಿಐ ಆರ್‌ಸೆಟಿ ಗದಗ ಸಂಸ್ಥೆಯ ನಿರ್ದೇಶಕರಾದ ಶಿವಕುಮಾರ್ ಎಸ್, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಎಮ್.ವಿ. ಚಳಗೇರಿ, ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್ ಎಸ್ ಹಾಗೂ ವಿವಿಧ ಅಧಿಕಾರಿಗಳು ಹಾಜರಿದ್ದರು.

## ಪದವಿ ಕಾಲೇಜು ಪಡೆಯಲು ರೂಪರೇಷ ತಯಾರಿಸಿ: ಪಾನಘಂಟಿ

# ಭಾಗ್ಯನಗರಕ್ಕೆ ಬೇಕು ಸರ್ಕಾರಿ ಪದವಿ ಕಾಲೇಜು

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಭಾಗ್ಯನಗರಕ್ಕೆ ಬೇಕು ಸರ್ಕಾರಿ ಪದವಿ ಕಾಲೇಜು ಅಭಿಯಾನ ಆರಂಭವಾಗಿದ್ದು, ಇದಕ್ಕೆ ರೂಪರೇಷಗಳನ್ನು ಸಿದ್ಧಪಡಿಸಿಕೊಳ್ಳಬೇಕು ಎಂದು ಹಿರಿಯ ನ್ಯಾಯವಾದಿ ರಾಘವೇಂದ್ರ ಪಾನಘಂಟಿ ಹೇಳಿದರು.

ನಗರ ಸಮೀಪದ ಭಾಗ್ಯನಗರದ ಶ್ರೀನಿವಾಸ ಕಲ್ಯಾಣ ಮಂಟಪದಲ್ಲಿ ಶುಕ್ರವಾರ ಭಾಗ್ಯನಗರಕ್ಕೆ ಬೇಕು ಸರ್ಕಾರಿ ಪದವಿ ಕಾಲೇಜು ಅಭಿಯಾನದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಶೈಕ್ಷಣಿಕವಾದ ಹಿನ್ನಲೆ ಭಾಗ್ಯನಗರಕ್ಕಿದೆ. ಕೊಪ್ಪಳದಿಂದ ಭಾಗ್ಯನಗರಕ್ಕೆ ಓದಲು ವಿದ್ಯಾರ್ಥಿಗಳು ಬರುತ್ತಾರೆ. ಪಿಯು ನಂತರ ಓದುವವರ ಪ್ರಮಾಣ ಕ್ಷೀಣಿಸಿದೆ. ಶೈಕ್ಷಣಿಕ ಅವಶ್ಯಕತೆಗಳನ್ನು ಸರ್ಕಾರವೇ ಪೂರೈಸಬೇಕು. ಸರ್ಕಾರದ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳೇ ಮಾಡಬೇಕು.



ಮುಂದಿನ ವರ್ಷವೇ ಆಗಬೇಕು. ಭಾಗ್ಯನಗರದವರು ಬೇಡುವುದಿಲ್ಲ, ಬೇಡಿದರೆ ಬಿಡುವುದೂ ಇಲ್ಲ ಎಂದರು.

ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸ ಗುಪ್ತಾ ಮಾತನಾಡಿ, ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸ ಗುಪ್ತಾ ಮಾತನಾಡಿ, ಎಷ್ಟು ಜನ ಶ್ರೀಮಂತರಿದ್ದಾರೋ, ಅದಕ್ಕಿಂತಲೂ ಹೆಚ್ಚು ಜನ ಬಡವರು ಇದ್ದಾರೆ. ಪದವಿ ಕಾಲೇಜು ಮಾತ್ರವಲ್ಲ, ಉದ್ಯೋಗ ಸೃಷ್ಟಿಸುವ ಕೋರ್ಸುಗಳನ್ನು ಮಾಡಬೇಕು ಎಂದರು.

### ಸಭೆಯ ನಿರ್ಣಯಗಳು

ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ದಿನದಂದು ಸಚಿವ, ಶಾಸಕರು, ಸಂಸದರು, ವಿಧಾನ ಪರಿಷತ್ ಪರಿಷತ್ ಸದಸ್ಯರಿಗೆ ಪದವಿ ಕಾಲೇಜು ಮಂಜೂರಾತಿಗೆ ಒತ್ತಾಯಿಸಿ ಮನವಿ ಸಲ್ಲಿಸಬೇಕು. ಸರ್ಕಾರಿ ಪದವಿ ಕಾಲೇಜು ಬೇಕು ಎನ್ನುವ ಸಮಿತಿ ರಚನೆ ಮಾಡಬೇಕು ಎಂದು ಸಭೆಯಲ್ಲಿ ನಿರ್ಣಯಿಸಲಾಯಿತು.

ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಚಾರ್ಯ ರಾಜಶೇಖರ್ ಪಾಟೀಲ್ ಅಂಗಡಿ, 2 ಪದವಿ ಪೂರ್ವ ಕಾಲೇಜುಗಳಲ್ಲಿ ಪರೀಕ್ಷಾ ಕೇಂದ್ರ ಮಾಡಿದ್ದೇವೆ. ಪಟ್ಟಣದ ಪಿಯು ಕಾಲೇಜಿನಲ್ಲಿ ಶೇ. 75ರಷ್ಟು ಮಹಿಳೆಯರೇ ಓದುತ್ತಿದ್ದಾರೆ. ಕೊಪ್ಪಳಕ್ಕೆ ತೆರಳಿ, ಓದಲು ತೊಂದರೆ ಆಗುತ್ತಿದೆ ಎಂದರು.

ಅಭಿಯಾನದ ಕೃಷ್ಣ ಇಟ್ಟಂಗಿ ಪ್ರಾಸ್ತಾವಿಕ ಮಾತನಾಡಿ, ಪಟ್ಟಣದಲ್ಲಿ ನಾಲ್ಕು ಪದವಿ ಪೂರ್ವ ಕಾಲೇಜುಗಳಿವೆ. 1,500 ವಿದ್ಯಾರ್ಥಿಗಳು ಓದುತ್ತಿದ್ದಾರೆ. ತನ್ನಿಂದ ತಾನಾಗಿಯೇ ಯಾವುದೇ ಸೌಲಭ್ಯ ದೊರೆತಿಲ್ಲ. ಪಟ್ಟಣಕ್ಕೆ ಪಡೆದ ಸೌಲಭ್ಯಗಳೆಲ್ಲವನ್ನೂ ಪಟ್ಟಣ ಪಂಚಾಯಿತಿ, ಮೇಲ್ಸೇತುವೆ ಹೋರಾಟ ಮಾಡಿಯೇ ಪಡೆದಿದ್ದೇವೆ ಎಂದರು.

ಭಾಗ್ಯನಗರ ಪಟ್ಟಣ ಪಂಚಾಯಿತಿ ಅಧ್ಯಕ್ಷ ತುಕಾರಾಮಪ್ಪ ಗಡಾದ ಅಧ್ಯಕ್ಷತೆ ವಹಿಸಿದ್ದರು.

ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ಹೊನ್ನುರಸಾಬ್ ಬೈರಾಪುರ, ಹಿರಿಯ ವಕೀಲ ರಾಘವೇಂದ್ರ ಪಾನಘಂಟಿ, ಶಿಕ್ಷಣ ಪ್ರೇಮಿ ದಾನಪ್ಪ ಜಿ. ಕವಲೂರು, ಸಾಹಿತಿ ಡಿ.ಎಂ.ಬಡಿಗೇರ್, ಪ.ಪಂ.ಸದಸ್ಯರಾದ ರಮೇಶ ಹ್ಯಾಟಿ, ಮೋಹನ ಅರಕಲ್, ವಾಸುದೇವ ಮೇಘರಾಜ್, ಮುಖಂಡರಾದ ಕೊಟ್ರೇಶ ಶೇಡ್ಮಿ, ಸುರೇಶ ದರಗದಕಟ್ಟಿ ಇದ್ದರು.

# ವೀರರಾಣಿ ಕಿತ್ತೂರು ಚೆನ್ನಮ್ಮಾಜಿಯವರ ವಿಜಯೋತ್ಸವ: ಕ್ರೀಡಾ ಸ್ಪಧೆಗಳು

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಸ್ವಾತಂತ್ರ್ಯದ ಬೆಳ್ಳಿ ಚುಕ್ಕಿಯೆನಿಸಿರುವ ವೀರರಾಣಿ ಕಿತ್ತೂರು ಚೆನ್ನಮ್ಮಾಜಿಯವರ ವಿಜಯೋತ್ಸವವನ್ನು ಪ್ರತಿಬಾರಿಯಂತೆ ಈ ಬಾರಿಯೂ ಅಕ್ಟೋಬರ್ 23 ರಿಂದ 25 ರವರೆಗೆ ಕಿತ್ತೂರಿನಲ್ಲಿ ನಡೆಸಲು ಬೆಳಗಾವಿ ಜಿಲ್ಲಾ ಆಡಳಿತ ವ್ಯವಸ್ಥೆ ಮಾಡಿದೆ.

ಇದರ ಪ್ರಯುಕ್ತ ಪುರುಷ ಮತ್ತು ಮಹಿಳೆಯರಿಗಾಗಿ ರಾಜ್ಯ ಮಟ್ಟದ ವಾಲಿಬಾಲ್, ಕಬಡ್ಡಿ, ಹಾಗೂ ಹಗ್ಗಜಗ್ಗಾಟ ಸ್ಪರ್ಧೆಗಳನ್ನು ಏರ್ಪಡಿಸಲಾಗುವುದು.

ಸದರಿ ಸ್ಪರ್ಧೆಗಳನ್ನು ಅಕ್ಟೋಬರ್ 24 ರಂದು ಬೆ 10 ಗಂಟೆಗೆ ಕಿತ್ತೂರಿನ ಕಲ್ಮಠ ಶಾಲಾ ಮೈದಾನದಲ್ಲಿ ಪ್ರಾರಂಭಿಸಲಾಗುವುದು. ವಿಜೇತರಿಗೆ ನಗದು ಬಹುಮಾನ ಹಾಗೂ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ನೀಡಲಾಗುವುದು.

ಆಸಕ್ತ ಕ್ರೀಡಾಪಟುಗಳು ತಮ್ಮ ಹೆಸರುಗಳನ್ನು ಅಕ್ಟೋಬರ್ 21 ರೊಳಗಾಗಿ ಉಪ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಳಗಾವಿ ಇವರಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಳಗಾವಿ ಇವರ ಕಚೇರಿ ದೂರವಾಣಿ ಸಂಖ್ಯೆ 0831–2950306 ನ್ನು ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಕಾರ್ಯಕ್ರಮ


# ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಅ.23ಕ್ಕೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಜಯಂತಿಯನ್ನು ಅಕ್ಟೋಬರ್ 23ರಂದು ಬೆಳಿಗ್ಗೆ 11.30 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ.

ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು



ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕ ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜೆ.ಎನ್. ಗಣೇಶ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಧಾರವಾಡ ಕೆ.ಎಂ.ಎಫ್ ನಿರ್ದೇಶಕಿ ಶಿವಲೀಲಾ ವಿನಯ ಕುಲಕರ್ಣಿ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಪ್ರತಿಪಕ್ಷದ ನಾಯಕ ರಾಜಶೇಖರ ಕಮತಿ, ಎಸ್.ಜೆ.ಎಮ್.ವಿ. ಮಹಾಂತ ಕಾಲೇಜಿನ ನಿವೃತ್ತ ಪ್ರಾಚಾರ್ಯ ಪ್ರೊ. ಎನ್.ಆರ್. ಬಾಳಿಕಾಯಿ, ಧಾರವಾಡ ಜಿಲ್ಲಾ ಲಿಂಗಾಯತ ಪಂಚಮಸಾಲಿ ವಕೀಲರ ಪರಿಷತ್‌ನ ಕಾರ್ಯಾಧ್ಯಕ್ಷ ಚಂದ್ರಶೇಖರ ಎಸ್.ನೇಗಿನಾಳ, ರಾಷ್ಟ್ರೀಯ ಬಸವದಳದ ಪ್ರಧಾನ ಕಾರ್ಯದರ್ಶಿ ಈರಣ್ಣ ಗಾಮಣ್ಣವರ ಮತ್ತು ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಮಾಜಿ ಸದಸ್ಯ ಸಿ.ಎಸ್.ಪಾಟೀಲ ಅವರು ಉಪಸ್ಥಿತರಿರುವರು.

ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ಎಚ್. ಕೋನರಡ್ಡಿ, ಎಸ್.ವ್ಹಿ. ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್. ಪಾಟೀಲ್, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ರಾಮಪ್ಪ ಕೃಷ್ಣಪ್ಪ ಬಡಿಗೇರ, ಹುಬ್ಬಳ್ಳಿ–ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕಿರ್ ಸನದಿ ಭಾಗವಹಿಸುವರು.

ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಡಾ. ಮೈತ್ರೇಯಿಣಿ ಗದಿಗೆಪ್ಪಗೌಡರ ಮತ್ತು ಚಿಂತಕ ಮಡಿವಾಳಪ್ಪ ಶಿರಿಯಣ್ಣವರ ಅವರು ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡುವರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಹುಬ್ಬಳ್ಳಿ ಧಾರವಾಡ ಮಹಾನಗರ ಪೋಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಗೋಪಾಲ ಎಂ.ಬ್ಯಾಕೋಡ್, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಈಶ್ವರ ಉಳ್ಳಾಗಡ್ಡಿ ಅವರು ಭಾಗವಹಿಸುವರೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

### ಲಿಂ.ಶ್ರೀ ವೀರಗಂಗಾಧರ ಜಗದ್ಗುರುಗಳ 42ನೇ ಲಿಂಗಾಂಗ ಸಾಮರಸ್ಯದ ಪುಣ್ಯ ಸ್ಮರಣೋತ್ಸವ

# ತಿರುವುಗಳನ್ನು ದಾಟಿ ಗುರಿಯತ್ತ ಸಾಗಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೌಲ್ಯಗಳ ಉಳಿವು-ಅಳಿವು ಮಾನವನ ಆಚರಣೆಯಲ್ಲಿವೆ. ಮನುಷ್ಯ ಜೀವನ ಅತ್ಯಂತ ಪವಿತ್ರವಾದುದು. ಅರಿತು ಬಾಳುವುದರಲ್ಲಿ ಸುಖ ಶಾಂತಿಯಿದೆ. ಪ್ರತಿಯೊಬ್ಬರ ಜೀವನದಲ್ಲಿ ಗುರಿ ಇರಬೇಕೇ ಹೊರತು ಉರಿ ಇರಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ಸಮೀಪದ ಮುಕ್ತಿಮಂದಿರ ಕ್ಷೇತ್ರದಲ್ಲಿ ಜರುಗಿದ ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ 42ನೇ ವರ್ಷದ ಲಿಂಗಾಂಗ ಸಾಮರಸ್ಯದ ಪುಣ್ಯ ಸ್ಮರಣೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜೀವನದಲ್ಲಿ ಎಷ್ಟೇ ತಿರುವುಗಳು ಬಂದರೂ ತಿರುಗಿ ನೋಡದೇ ಗುರಿಯತ್ತ ಸಾಗಬೇಕು. ನದಿಗಳು ಮುಂದಕ್ಕೆ ಹರಿಯುತ್ತವೆಯೇ ಹೊರತು ಹಿಂದಕ್ಕೆ ಹರಿಯುವುದಿಲ್ಲ. ಅದೇ ರೀತಿ ಮಾನವ ಜೀವನವು ಕೂಡಾ ಕಳೆದು ಹೋದ ಬದುಕಿನ ಬಗ್ಗೆ ಚಿಂತಿಸದೇ ಮುಂದೆ ಸಾಗಬೇಕು. ಸತ್ಯಕ್ಕಾಗಿ ಯಾವುದನ್ನಾದರೂ ತ್ಯಾಗ ಮಾಡಿ. ಆದರೆ ಸತ್ಯವನ್ನು ತ್ಯಾಗ ಮಾಡಬಾರದು. ಜೀವನದಲ್ಲಿ ಗಳಿಸುವುದಾದರೆ ಮಾನವೀಯತೆ, ಪ್ರಾಮಾಣಿಕತೆ, ಗೆಳೆತನ, ಪ್ರೀತಿ-ವಿಶ್ವಾಸ ಗಳಿಸು. ಆದರೆ ಹಣ, ಆಸ್ತಿ- ಅಂತಸ್ತುಗಳನ್ನಲ್ಲ ಎಂದರು.

ನೇತೃತ್ವ ವಹಿಸಿದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು ಮಾತನಾಡಿ, ಮನುಷ್ಯನಿಗೆ ಆರೋಗ್ಯ ಮತ್ತು ಸಂತೋಷ ಎಲ್ಲ ಸಂಪತ್ತುಗಳಿಗಿಂತ ಬಹು ದೊಡ್ಡ ಸಂಪತ್ತಾಗಿವೆ. ಜೀವನದ ವಿಕಾಸ ಶ್ರೇಯೋಭಿವೃದ್ಧಿಗಾಗಿ ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಕೊಟ್ಟ ಸಂದೇಶ ಉಜ್ವಲ ಭವಿಷ್ಯಕ್ಕೆ ಕಾರಣವಾಗಿವೆ ಎಂದರು.

ಎಮ್ಮಿಗನೂರು ಹಂಪಿ ಸಾವಿರದೇವರ ಮಠದ ವಾಮದೇವ ಮಹಂತ ಶಿವಾಚಾರ್ಯರು ಮಾತನಾಡಿ, ಕಷ್ಟದಲ್ಲಿ ಜೊತೆಗಿದ್ದವರನ್ನು ಸುಖ ಬಂದಾಗ ಮರೆಯಬಾರದು. ಬಂಗಾರವನ್ನು ಎಷ್ಟು ಚೂರು ಮಾಡಿದರೂ ಅದರ ಬೆಲೆ ಕಡಿಮೆಯಾಗುವುದಿಲ್ಲ. ಅದೇ ರೀತಿ ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಭಕ್ತರ ಬಾಳನ್ನು ಬಂಗಾರಗೊಳಿಸುವುದರಲ್ಲಿ ಸದಾ ಶ್ರಮಿಸಿದ್ದನ್ನು ಎಂದೆಂದಿಗೂ ಮರೆಯಲಾಗದು. ಅವರು ತೋರಿದ ಧರ್ಮದ ದಾರಿಯಿಂದ ನಮ್ಮೆಲ್ಲರ ಬಾಳಿಗೆ ಬೆಳಕು ದೊರಕಿದೆ ಎಂದರು.

ನೊಣವಿನಕೆರೆಯ ಡಾ. ಕರಿವೃಷಭ ಶಿವಯೋಗಿಗಳು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಬಳ್ಳಾರಿ ಜಿಲ್ಲೆ ಕುರುಗೋಡಿನ ಡಾ.ಶಿವರುದ್ರಗೌಡ್ರು ನಾಗನಗೌಡ್ರ ಇವರಿಗೆ 'ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಪ್ರಶಸ್ತಿ'ಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಪ್ರದಾನ ಮಾಡಿ ಶುಭ ಹಾರೈಸಿದರು.

ಈ ಪವಿತ್ರ ಸಮಾರಂಭದಲ್ಲಿ ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು, ಬಂಕಾಪುರ ಅರಳೆಲೆ ಹಿರೇಮಠದ ರೇವಣಸಿದ್ಧ ಶಿವಾಚಾರ್ಯರು, ಗಿರಿಸಾಗರ ರುದ್ರಮುನಿ ಶಿವಾಚಾರ್ಯರು, ಲಕ್ಷ್ಮೇಶ್ವರ ಕರೇವಾಡಿಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯರು, ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಬಿಲ್ವ ಕೆರೂರು ಹಿರೇಮಠದ ಅಭಿನವ ಸಿದ್ದಲಿಂಗ ಶಿವಾಚಾರ್ಯರು, ಚಳಗೇರಿ ಹಿರೇಮಠದ ವೀರಸಂಗಮೇಶ್ವರ ಶಿವಾಚಾರ್ಯರು, ನಿಡಗುಂದಿ ರುದ್ರಮುನಿ ಶಿವಾಚಾರ್ಯರು, ಕಲಾದಗಿ ಪಂಚಗ್ರಹ ಹಿರೇಮಠದ ಗಂಗಾಧರ ಶಿವಾಚಾರ್ಯರು, ಲಿಂಗದಹಳ್ಳಿ ವೀರಭದ್ರ ಶಿವಾಚಾರ್ಯರು, ಕೊಡಿಯಾಲ ಹೊಸಪೇಟೆ ಪುಣ್ಯಕೋಟಿಮಠದ ಜಗದೀಶ್ವರ ಸ್ವಾಮಿಗಳು ಭಾಗವಹಿಸಿದ್ದರು. ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರು, ಮಾಜಿ ಶಾಸಕ ಜಿ.ಎಸ್.ಗಡ್ಡದ್ದೇವರಮಠ, ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ್, ಗದಗ ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ವೀರಣ್ಣ ಪವಾಡದ, ಚಂದ್ರು ಬಾಳಿಹಳ್ಳಿಮಠ, ವೀರೇಶ ಕೂಗುಮಠ ಮೊದಲಾದ ಗಣ್ಯರು ಉಪಸ್ಥಿತರಿದ್ದರು.

ಡಾ. ಗುರುಸ್ವಾಮಿ ಕಲಕೇರಿ ಅವರಿಂದ ಭಕ್ತಿ ಗೀತೆ ಕಾರ್ಯಕ್ರಮ ಜರುಗಿತು. ಸವಣೂರಿನ ಡಾ.ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಮಲೆಬೆನ್ನೂರಿನ ವೀರಶೈವ ಸಮಾಜದ ಧುರೀಣರು ಅನ್ನ ದಾಸೋಹ ನೆರವೇರಿಸಿದರು.



ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಸತ್ಯ, ಶಾಂತಿ, ಧರ್ಮ, ಸಂಸ್ಕೃತಿಗಳ ಪುನರುತ್ಥಾನಕ್ಕಾಗಿ ಸದಾ ಶ್ರಮಿಸಿದ ವಿಭೂತಿ ಪುರುಷರು. ಅವರ ವಿಶ್ವ ಬಂಧುತ್ವ, ವಿಶಾಲ ಚಿಂತನೆಗಳು ಮಾನವ ಕುಲದ ವಿಕಾಸಕ್ಕಾಗಿ ಮುಡಿಪಾಗಿದ್ದವು. ಅಗಲಿ 42 ವರ್ಷಗಳಾದರೂ ಅವರ ಆದರ್ಶ, ವಿಚಾರ ಧಾರೆಗಳು ಮಾನವ ಜನಾಂಗಕ್ಕೆ ದಾರಿ ದೀಪವಾಗಿವೆ.

**– ಡಾ. ವೀರಸೋಮೇಶ್ವರ ಜಗದ್ಗುರುಗಳು.**
ಶ್ರೀ ರಂಭಾಪುರಿ ಪೀಠ, ಬಾಳೆಹೊನ್ನೂರು.

ಸಮಾರಂಭ ಉದ್ಘಾಟಿಸಿದ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಭೂಲೋಕದ ಶಿವನಂತೆ ಅವತರಿಸಿ ಮಾನವ ಧರ್ಮದ ಹಿರಿಮೆಯನ್ನು ಬೋಧಿಸಿದವರು. ವಿಶ್ವಬಂಧುತ್ವದ ಭಾವನೆಗಳನ್ನು ಬೆಳೆಸಿ ಸಮಾಜದಲ್ಲಿ ಸಾಮರಸ್ಯ ಸೌಹಾರ್ದತೆ ಬೆಳೆಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಅವರ ಆದರ್ಶ ಲೋಕೋದ್ಧಾರ ವಿಚಾರ ಧಾರೆ ಸಕಲರ ಬಾಳಿನಲ್ಲಿ ಬೆಳಕನ್ನು ಉಂಟು ಮಾಡುತ್ತವೆ ಎಂದು ಹರುಷ ವ್ಯಕ್ತಪಡಿಸಿದರು.

# ಲಕ್ಷ್ಮೇಶ್ವರ ಬಂದ್‌ಗೆ ನೀರಸ ಪ್ರತಿಕ್ರಿಯೆ

▶▶ಮೊದಲನೇ ಪುಟದಿಂದ

ಪೊಲೀಸರ ಸರ್ಪಗಾವಲು ಬೇಧಿಸಿ 12 ಗಂಟೆಯ ವೇಳೆಗೆ ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದ ಹತ್ತಿರ ಹತ್ತಾರು ಕಾರ್ಯಕರ್ತರೊಂದಿಗೆ ಬಂದ ರಾಜು ಖಾನಪ್ಪನವರ ಲಕ್ಷ್ಮೇಶ್ವರ ಬಂದ್ ಕರೆಗೆ ಕಾರಣ ತಿಳಿಸಿ, ಬಂದ್‌ಗೆ ಪಟ್ಟಣದ ಬಹುತೇಕ ಜನರು ಸಹಕಾರ ನೀಡಿದ್ದಾರೆ. ಇದು ಪಿಎಸ್‌ಐ ಹಿಂದೂ ವಿರೋಧಿ ನೀತಿ, ಭ್ರಷ್ಟತನದ ಆಡಳಿತ ವೈಖರಿಗೆ ಸಾಕ್ಷಿಯಾಗಿದೆ. ಕೂಡಲೇ ಅಮಾನತು ಮಾಡುವಂತೆ ಒತ್ತಾಯಿಸಿ, ಪ್ರತಿಭಟನೆ ಹತ್ತಿಕ್ಕುವ ಪೊಲೀಸರ ಕಾರ್ಯ ವೈಖರಿಯನ್ನು ಖಂಡಿಸಿದರು.

ಈ ವೇಳೆ ಶ್ರೀರಾಮಸೇನೆ ಕಾರ್ಯಕರ್ತರು, ಮಹಿಳೆಯರು, ಪ್ರತಿಭಟನಾಕರರನ್ನು ಪೊಲೀಸರು ವಶಕ್ಕೆ ಪಡೆದು ಸಾರಿಗೆ ಬಸ್ ಮೂಲಕ ಗದುಗಿಗೆ ಕರೆದೊಯ್ದರು. ಇದರಿಂದ ಕೆರಳಿದ ಗೋಸಾವಿ ಸಮಾಜದವರು ಸೋಮವಾರದಿಂದ ತಹಸೀಲ್ದಾರ ಕಚೇರಿಯ ಮುಂದೆ ಪಿಎಸ್‌ಐ ಅಮಾನತ್ತುಗೊಳಿಸಬೇಕು ಮತ್ತು ತಮ್ಮ ಬೆಂಬಲಕ್ಕೆ ನಿಂತ ಶ್ರೀರಾಮಸೇನೆ ಕಾರ್ಯಕರ್ತರನ್ನು ಬಿಡುಗಡೆಗೊಳಿಸುವವರೆಗೂ ಅಹೋರಾತ್ರಿ ಉಪವಾಸ ಸತ್ಯಾಗ್ರಹ ಕೈಗೊಳ್ಳುವುದಾಗಿ ತಿಳಿಸಿದರು.

ಪ್ರತಿಭಟನೆ ಮುಗಿಯುತೆನ್ನುತ್ತಿದ್ದಂತೆಯೇ ಗದಗ ಕಡೆಯಿಂದ ಬಂದ ಶ್ರೀರಾಮಸೇನೆಯ ಹತ್ತಾರು ಕಾರ್ಯಕರ್ತರು ಗದಗ ಅಗಸಿಯಿಂದ ಹೊಸ ಬಸ್ ನಿಲ್ದಾಣದವರೆಗೆ ಘೋಷಣೆ ಕೂಗುತ್ತಾ ಬಂದರು. ಈ ವೇಳೆ ಬಂದ್ ವಿರೋಧಿಸಿದ ಪ್ರಗತಿಪರ ಸಂಘಟನೆಗಳ ಒಕ್ಕೂಟದ ಕೆಲ ಮುಖಂಡರು ಶ್ರೀರಾಮ ಸೇನೆ ಕಾರ್ಯಕರ್ತರನ್ನು ತಡೆಯುವ ಪ್ರಯತ್ನ ಮಾಡಿದರು.


ಈ ಸಮಯದಲ್ಲಿ ಶ್ರೀರಾಮಸೇನೆ ಕಾರ್ಯಕರ್ತರು ಪಿಎಸ್‌ಐಗೆ ಧಿಕ್ಕಾರ ಕೂಗಿದರೆ, ಕೆಲವರು ಪಿಎಸ್‌ಐಗೆ ಜಯವಾಗಲಿ ಎಂದು ಕೂಗಿದರು. ಈ ವೇಳೆ ಹೆಚ್ಚು ಸಂಖ್ಯೆಯಲ್ಲಿ ಜನ ಸೇರಿ ಕೆಲ ಹೊತ್ತು ಪ್ರಕ್ಷುಬ್ಧ ವಾತಾವರಣ ನಿರ್ಮಾಣಗೊಂಡಿತ್ತು. ಕೂಡಲೇ ಧಾವಿಸಿದ ಪೊಲೀಸರು ಶ್ರೀರಾಮಸೇನೆ ಕಾರ್ಯಕರ್ತರನ್ನು ವಶಕ್ಕೆ ಪಡೆದು ಪರಿಸ್ಥಿತಿ ತಿಳಿಗೊಳಿಸಿದರು.

# ಅತಿಯಾದ ಮಳೆ । ಹಿಂಗಾರು ಬಿತ್ತನೆಗೆ ಹಿನ್ನಡೆ

■ವಿಜಯಸಾಕ್ಷಿ ಸುದ್ದಿ, ರೋಣ

ಬಿಟ್ಟೂ ಬಿಡದೆ ಸುರಿಯುತ್ತಿರುವ ಮಳೆಯಿಂದ ಹಿಂಗಾರು ಬಿತ್ತನೆಗೆ ಹಿನ್ನಡೆಯಾಗಿದ್ದು, ರೈತ ಸಮುದಾಯ ತೀವ್ರ ಸಂಕಷ್ಟದ ಸ್ಥಿತಿಯನ್ನು ಎದುರಿಸಬೇಕಾದ ಸಂದರ್ಭದ ತಾಲೂಕಿನಲ್ಲಿ ನಿರ್ಮಾಣವಾಗಿದೆ.

ಈ ಹಿಂದೆ ಮುಂಗಾರು ಹಂಗಾಮಿನಲ್ಲಿ ಬಿತ್ತನೆಯ ಸಮಯದಲ್ಲಿ ಸುರಿದಿದ್ದ ಮಳೆ, ನಂತರ ಅಳಿದು ಉಳಿದಿರುವ ಬೆಳೆ ಕಟಾವು ಮಾಡುವ ಸಂದರ್ಭದಲ್ಲಿ ಸುರಿಯತೊಡಗಿದೆ. ಇದರಿಂದ ರೈತ ಸಮುದಾಯ ಹಾನಿ ಅನುಭವಿಸುವಂತಾಯಿತು.



ವಿಪರ್ಯಾಸವೆಂದರೆ, ಈಗ ಹಿಂಗಾರು ಬಿತ್ತನೆಗೂ ಅವಕಾಶ ನೀಡದೆ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ ರೈತ ಸಮುದಾಯ ಮತ್ತಷ್ಟು ಆತಂಕಕ್ಕೆ ಈಡಾಗಿದೆ.


ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ಜಮೀನುಗಳಲ್ಲಿ ತೇವಾಂಶ ಹೆಚ್ಚಾಗಿದೆ. ಬಿತ್ತನೆಗೆ ಭೂಮಿ ಹದಗೊಳಿಸಲಾಗುತ್ತಿಲ್ಲ. ಮಳೆಯಿಂದ ಜಮೀನುಗಳಲ್ಲಿ ನೀರು ನಿಂತುಕೊಂಡಿದ್ದು, ರೈತರ ಮೊಗದಲ್ಲಿ ನಿರಾಶೆ ಮೂಡಲು ಮುಖ್ಯ ಕಾರಣವಾಗಿದೆ. ಇದರಿಂದ ಕೃಷಿ ಚಟುವಟಿಕೆಗಳೂ ಸ್ಥಗಿತಗೊಂಡಿವೆ.

ಅತಿಯಾದ ಮಳೆಯಿಂದ ಈರುಳ್ಳಿ ಸೇರಿದಂತೆ ಮಿಶ್ರ ಬೆಳೆಗಳು ಸಹ ಹಾನಿಗೊಳಗಾಗಿವೆ. ಕೆಲ ಗ್ರಾಮಗಳಲ್ಲಿ ಜಮೀನುಗಳಿಗೆ ತೆರಳುವ ರಸ್ತೆಗಳೇ ಹಾಳಾಗಿದ್ದು, ಸಂಚಾರ ಮಾಡದ ಸ್ಥಿತಿ ನಿರ್ಮಾಣವಾಗಿದೆ.



ಮುಳಗುಂದ ಪಟ್ಟಣದ ಕೊಳಚೆ ಪ್ರದೇಶದ ಗ್ರಂಥಾಲಯ ಮತ್ತು ಸಾರ್ವಜನಿಕ ಗ್ರಂಥಾಲಯದಲ್ಲಿ ವಾಲ್ಮೀಕಿ ಮಹರ್ಷಿ ಜಯಂತ್ಯುತ್ಸವದ ಅಂಗವಾಗಿ ಗ್ರಂಥಾಲಯದ ಮೇಲ್ವಿಚಾರಕ ರಮೇಶ ಮ್ಯಾಗೇರಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಮಹರ್ಷಿ ವಾಲ್ಮೀಕಿ ರಾಮಾಯಣ ಮಾಹಾಕಾವ್ಯ ರಚಿಸುವ ಮೂಲಕ ಜನಮಾನಸದಲ್ಲಿ ಚಿರಸ್ಥಾಯಿಯಾಗಿ ಉಳಿದವರು. ಇಂತವರ ಆದರ್ಶ ತತ್ವಗಳನ್ನು ಪಾಲಿಸೋಣ ಎಂದರು.

# ಶಾಲಾ ಆವರಣದ ಸ್ವಚ್ಛತೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ದಸರಾ ನಿಮಿತ್ತ ಶಾಲೆಗಳಿಗೆ 15 ದಿನಗಳ ರಜೆ ಮುಗಿದು ಮತ್ತೆ ಅ.21ರಂದು ಶಾಲೆಗಳು ಪ್ರಾರಂಭವಾಗಲಿದ್ದು, ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ.1ರ ಶಾಲಾ ಆವರಣವನ್ನು ಪ.ಪಂ ಹಾಗೂ ಕರ್ನಾಟಕ ಗ್ರಾಮೀಣ ವಿಕಾಸ ಬ್ಯಾಂಕ್ ಸಹಯೋಗದಲ್ಲಿ ಸ್ವಚ್ಛಗೊಳಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ದಸರಾ ನಿಮಿತ್ತ ಶಾಲಾ ರಜೆ ಮುಗಿದಿದ್ದು, ಶಾಲಾ ಆವರಣ ಸೇರಿದಂತೆ ಶಾಲಾ ಅಡುಗೆ ಕೋಣೆ, ಪರಿಕರಗಳನ್ನು ಸ್ವಚ್ಛಗೊಳಿಸಲಾಗಿದೆ. ಅ.21ರಿಂದ ಶಾಲಾ ಅವಧಿಗಳು ಪ್ರಾರಂಭವಾಗುತ್ತಿದ್ದು, ಎಲ್ಲಾ ಮಕ್ಕಳು ಹಾಜರಾಗಬೇಕು ಎಂದರು.

ಕರ್ನಾಟಕ ಬ್ಯಾಂಕ್ ಮ್ಯಾನೇಜರ್ ವೆಂಕಟಪ್ಪ, ಸಿಬ್ಬಂದಿಗಳಾದ ಮನಯ, ರೇವಣ್ಣ, ದೀನೇಶ, ಪ.ಪಂ ಪೌರ ಕಾರ್ಮಿಕರು, ಶಾಲಾ ಎಸ್‌ಡಿಎಂಸಿ ಸದಸ್ಯರು ಇದ್ದರು.

# ಎನ್.ಎಸ್.ಎಸ್. ಬದುಕುವುದನ್ನು ಕಲಿಸುತ್ತದೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ಎಲ್.ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಎನ್.ಎಸ್.ಎಸ್. ಘಟಕದ ವತಿಯಿಂದ ಶನಿವಾರ 2024-2025ನೇ ಸಾಲಿನ ಎನ್.ಎಸ್.ಎಸ್. ಕಾರ್ಯಚುವಟಿಕೆಗಳ ಉಧ್ಘಾಟನಾ ಕಾರ್ಯಕ್ರಮ ನೆರವೇರಿತು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ನಂದಿವೇರಿ ಸಂಸ್ಥಾನಮಠದ ಶ್ರೀ ಶಿವಕುಮಾರ ಸ್ವಾಮೀಜಿ ಆಶೀರ್ವಚನ ನೀಡಿ, ಎನ್.ಎಸ್.ಎಸ್. ವಿದ್ಯಾರ್ಥಿಗಳು ಭಾಗ್ಯವಂತರು, ವಿಷೇಶ ನಾಯಕತ್ವ ಶಿಬಿರ, ವ್ಯಕ್ತಿತ್ವ ವಿಕಸನ ಶಿಬಿರಗಳೊಂದಿಗೆ ಎನ್.ಎಸ್.ಎಸ್. ಸಮಾಜದಲ್ಲಿ ಬದುಕುವುದನ್ನು ಕಲಿಸುತ್ತದೆ. ಸಮಯ ಪಾಲನೆ, ಶಿಸ್ತು, ಗುರು-ಹಿರಿಯರಿಗೆ ಗೌರವ ಕೊಡುವುದನ್ನು ಎನ್.ಎಸ್.ಎಸ್. ಕಲಿಸುತ್ತದೆ. ನೀನು ಸಾಮಾನ್ಯನಾಗಿರು, ಆದರೆ ಜಾಗತಿಕವಾಗಿ ವಿಚಾರವನ್ನು ಮಾಡು ಮತ್ತು ಸಮಾಜಕ್ಕೆ ಸೇವೆ ಮಾಡು ಎಂದರು. ಮುಖ್ಯ ಅಥಿತಿಗಳಾಗಿ ಆಗಮಿಸಿದ್ದ ಜೆ.ಟಿ. ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಪ್ರೊ. ಎಸ್.ಬಿ. ಹಾವೇರಿ ಮಾಅತನಾಡಿ, ಎನ್.ಎಸ್.ಎಸ್. ಒಂದು ಒಳ್ಳೆಯ ಸಂಘಟನೆ ಹಾಗೂ ಇದು 'ನನಗಲ್ಲ ನಿನಗೆ' ಎಂಬ ಸಚಿದೇಶ ಸಾರುತ್ತದೆ ಎಂದು ತಿಳಿಸಿದರು.ಮಹಾವಿದ್ಯಾಲಯದ ಇತಿಹಾಸ ವಿಭಾಗದ ಮುಖ್ಯಸ್ಥರು ಹಾಗೂ ಎನ್.ಎಸ್.ಎಸ್. ಘಟಕದ ನಿಕಟಪೂರ್ವ ಕಾರ್ಯಕ್ರಮಾಧಿಕಾರಿಗಳಾದ ಡಾ. ವಿಠ್ಠಲ್ ಕೊಳಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಎನ್.ಎಸ್.ಎಸ್. ಘಟಕದ ಕಾರ್ಯಕ್ರಮಾಧಿಕಾರಿ ಪ್ರೊ. ವಾಗೀಶ ಗು.ರೇಶ್ಮಿ, ಸಹ ಕಾರ್ಯಕ್ರಮಾಧಿಕಾರಿ ಪ್ರೊ. ವೀರಣ್ಣ ಬಡಿಗೇರ, ಎನ್.ಎಸ್.ಎಸ್. ಘಟಕದ ನಾಯಕರಾದ ಪವನ ಕುಲಕರ್ಣಿ, ನಾಯಕಿಯರಾದ ಸಾಕ್ಷೀ ಹೂಸಮಠ, ಮಹಾವಿದ್ಯಾಲಯದ ಎಲ್ಲ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು, ಸ್ವಯಂಸೇವಕರು ಪಾಲ್ಗೊಂಡಿದ್ದರು. ಪವಿತ್ರಾ ಭಜಂತ್ರಿ ಸ್ವಾಗತಿಸಿದರು. ಸಹನಾ ನಾಲವಾಡ ಹಾಗೂ ಆನಂದ ಮಾದರ ನಿರೂಪಿಸಿದರು.




# ಲಕ್ಷ್ಮಪ್ಪ ಆರಿ ಅವರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಭಾರತೀಯ ಸೇನೆಯಲ್ಲಿ 1999ರಲ್ಲಿ ಮದ್ರಾಸ್ ರೆಜಿಮೆಂಟ್‌ನಲ್ಲಿ ಸೇರ್ಪಡೆಯಾಗಿ 17 ವರ್ಷಗಳ ಕಾಲ ನಿರಂತರವಾಗಿ ಸೇವೆಯನ್ನು ಸಲ್ಲಿಸಿ ನಿವೃತ್ತಿ ಪಡೆದು, ನಂತರ ಪದವಿಪೂರ್ವ ಶಿಕ್ಷಣವನ್ನು ಮುಗಿಸಿ ಪೊಲೀಸ್ ಇಲಾಖೆಯಲ್ಲಿ ಉನ್ನತ ಹುದ್ದೆಯಲ್ಲಿ ಸೇರ್ಪಡೆಯಾಗಿ, ನಿಷ್ಠೆಯಿಂದ ಕರ್ತವ್ಯ ನಿರ್ವಹಿಸಿ, ಗದಗ-ಬೆಟಗೇರಿಯ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಆಗಿ ಕಾರ್ಯ ನಿರ್ವಹಿಸುತ್ತಿರುವ ಕುಷ್ಟಗಿ ತಾಲೂಕಿನ ಶಾಡಲಗೇರಿ ಗ್ರಾಮದ ಮಾಜಿ ಸೈನಿಕ ಲಕ್ಷ್ಮಪ್ಪ ಆರಿ ಅವರನ್ನು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ ಗದಗ ಜಿಲ್ಲಾ ಘಟಕದ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ ನೇತೃತ್ವದಲ್ಲಿ ಗೌರವಿಸಿದರು.

ಈ ಸಂದರ್ಭದಲ್ಲಿ ಪದಾಧಿಕಾರಿಗಳಾದ ಎನ್.ಆರ್. ದೇವಾಂಗಮಠ, ವೆಂಕಪ್ಪ ಕಲಹಾಳ, ದಾವಲ್ ಅಂಗಡಿ, ಚಂದ್ರಶೇಖರಪ್ಪ ಬಿಳೆಯಲಿ, ಸುಭಾಷಚಂದ್ರ ಬಗರಿ, ಮಹಾಂತೇಶ್ ಚೌಡಿ, ಈರಣ್ಣ ಚೇಗರಡ್ಡಿ, ಶ್ರೀನಿವಾಸ್ ಜಲರಡ್ಡಿ, ಅಂಜನಾ ಉಪ್ಪಾರ , ರಾಮಲಿಂಗಪ್ಪ ಮುಂದಿನಮನಿ, ಐ.ಬಿ. ಪಡೆಸೂರ, ನಿಂಗಪ್ಪ ಚೋರಗಸ್ತಿ ಸೇರಿದಂತೆ ಹಲವಾರು ಮಾಜಿ ಸೈನಿಕರು, ಪೊಲೀಸ್ ಸಿಬ್ಬಂದಿಗಳು ಉಪಸ್ಥಿತರಿದ್ದರು.



# ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆ ನೂತನ ರಾಜ್ಯಾಧ್ಯಕ್ಷರ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಪ್ರವಾಸಿ ಮಂದಿರದಲ್ಲಿ ನಡೆದ ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಯ ಸಭೆಯಲ್ಲಿ ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮದ ಪ.ಪೂ ಬಸವರಾಜಸ್ವಾಮಿ ಬಸವರೆಡ್ಡೆರ ಅವರನ್ನು ವೇದಿಕೆಯ ನೂತನ ರಾಜ್ಯಾಧ್ಯಕ್ಷರನ್ನಾಗಿ ನೇಮಕ ಮಾಡಲಾಯಿತು.

ಸಂಸ್ಥಾಪಕ ಅಧ್ಯಕ್ಷ ಎಂ.ಐ. ಮುಳಗುಂದ ನೇಮಕಾತಿ ಆದೇಶ ಪತ್ರವನ್ನು ನೀಡಿ, ಮುಂದಿನ ಕಾರ್ಯನಿರ್ವಹಿಸಲು ಆದೇಶ ನೀಡಿದರು. ಇದೇ ಸಂದರ್ಭದಲ್ಲಿ ಸುನೀತಾ ಬಳಗೇರ ರಾಜ್ಯ ರೈತ ಘಟಕದ ಮಹಿಳಾ ಅಧ್ಯಕ್ಷರಾಗಿ, ಶಿವಲಿಂಗಯ್ಯ ಶೇ.ಮುಳಗುಂದಮಠ ರಾಜ್ಯ ನಿರ್ದೇಶಕರಾಗಿ, ಶಾಂತವೀರಯ್ಯ ಚ.ತೆಲಗಿಮಠರನ್ನು ರಾಜ್ಯ ಕಾರ್ಮಿಕ ಘಟಕದ ಕಾರ್ಯದರ್ಶಿಯಾಗಿ ನೇಮಕ ಮಾಡಿ ಆದೇಶ ಪತ್ರಗಳನ್ನು ನೀಡಲಾಯಿತು. ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ಸುರೇಶ ಮೇದಾರ, ರಾಜ್ಯ ಸಂಚಾಲಕ ರಾಜಶೇಖರ ಕಾತರಕಿ, ಅಕ್ಬರ್ ಬೇಗ್, ಆರ್.ಎನ್. ಹುಬ್ಬಳ್ಳಿ, ಶಾಹುಲ ಹಮೀದ, ಸುರೇಶ ಬೆಳದಡಿ, ಸೋಮಶೇಖರ ಟಣಕೆದಾರ, ಪೀರಅಹ್ಮದ ಅಂಚಿ, ನೂರುಲ್ಲಾ ಪಠಾಣ, ಪ್ರಕಾಶ ಮೇಟಿ, ರಾಜು ನಾಯಕ, ದೇವಪ್ಪಾ ಮಲ್ಲಸಮುದ್ರ, ಮಂಜು ಅಕ್ಕಿ ಸೇರಿದಂತೆ ಸದಸ್ಯರು ಪಾಲ್ಗೊಂಡಿದ್ದರು.



## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಅಕ್ಟೋಬರ್ 20 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 – ಗಂಗಿಮಡಿ, ದಖನಿಯವರ ಲೈನ್, ಈಶ್ವರ ಗುಡಿ, ಗಿರಣಿ ಲೈನ್, ಧಾರವಾಡದವರ 1 ರಿಂದ 5 ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 3 – ಬಣ್ಣದ ನಗರ ಪೂರ್ತಿ ಭಾಗ, ಕುಂಬಾರ ಓಣಿ, ಮಸೂತಿ ಲೈನ್, ರಾಜಾಜಿ ರಸ್ತೆ, ಅಯ್ಯಪ್ಪಜ್ಜನ ಗದ್ದುಗೆ, ಒನಕಿ ದವಾಖಾನೆ, ಹುಯಿಲಗೋಳ ರಸ್ತೆ 1 ರಿಂದ 5 ಭಾಗಗಳು, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 6 – ಸಿದ್ದಲಿಂಗನಗರ, ರೊಟ್ಟಿ ಅವರ ಲೈನ್, ಮಂಜುರವರ ಲೈನ್, ನಾವಳ್ಳಿಯವರ ಲೈನ್, ಪಿಪಿ ಗುಡಿ ಹಿಂದಿನ ಭಾಗ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 16 – ಕುಷ್ಟರೋಗ ಕಾಲೋನಿ, ಅಂಬೇಡ್ಕರ್ ನಗರ, ಸುಣ್ಣದ ಭಟ್ಟಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 28 – ಮಲ್ಲಾಡದರವರ ಲೈನ್, ದೇವಗೇರಿ ಸರ್ ಲೈನ್, ಸಂತೋಷ ಕಿರಾಣಿ ಲೈನ್, ಎಸ್ ಎಸ್ ಪಾಟೀಲ್ ಲೈನ್, ಕಾಗದಗಾರ ಲೈನ್, ಅಬ್ಬಿಗೇರಿ ಲೈನ್, ಕೊರ್ಲಹಳ್ಳಿ ಮಾಸ್ತರ್ ಲೈನ್, ಕೃಷ್ಣ ಮಿಷನ್ ಟ್ಯೂಷನ್, ಸೊಲ್ಲಾಪಟ್ಟಿ ಲೈನ್, ಗವಾಯಿಗಳ ಆಶ್ರಮ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 29 – ಶಿಕ್ಷಕರ ಬಡಾವಣೆ. ವಾರ್ಡ್ ನಂ. 5 – ನೇಕಾರ ಕಾಲೋನಿ, ನರಸಾಪುರ ಆಶ್ರಯ ಕಾಲೋನಿ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಐಎಂಎ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಡಾ.ಯೋಗಾನಂದ ರೆಡ್ಡಿ ಅಭಿಮತ

# ಗದಗ ಐಎಂಎ ರಾಜ್ಯದ ಗಮನ ಸೆಳೆದಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ವೈದ್ಯಕೀಯ ಸಂಸ್ಥೆಯ ರಾಜ್ಯ ಘಟಕಕ್ಕೆ ಹಾಗೂ ವೈದ್ಯಕೀಯ ಕ್ಷೇತ್ರದ ಉನ್ನತಿಗೆ ಗದಗ ಜಿಲ್ಲೆಯ ಕೊಡುಗೆ ಅನುಪಮವಾಗಿದೆ ಎಂದು ಕರ್ನಾಟಕ ಮೆಡಿಕಲ್ ಕೌನ್ಸಿಲ್‌ನ ಗೌರವ ಅಧ್ಯಕ್ಷ ಡಾ. ವೈ.ಸಿ.ಯೋಗಾನಂದ ರೆಡ್ಡಿ ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಗದುಗಿನ ಪೊಲೀಸ್ ಭವನದಲ್ಲಿ ಜರುಗಿದ ಗದಗ ಭಾರತೀಯ ವೈದ್ಯಕೀಯ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದ ಮುಖ್ಯ ಅತಿಥಿಗಳಾಗಿ ಅಧಿಕಾರ ಹಸ್ತಾಂತರಿಸಿ ಮಾತನಾಡಿದರು.

ಅಖಿಲ ಭಾರತ ಮಟ್ಟದಲ್ಲಿ ಸಹಕಾರಿ ಆಂದೋಲನವನ್ನು ಹುಟ್ಟು ಹಾಕಿದ್ದು ಗದುಗಿನ ಪುಣ್ಯಭೂಮಿ. ಮುದ್ರಣ ಕಾಶೀ ಎಂದೇ ಹೆಸರಾದ ಗದುಗಿನಲ್ಲಿ ವೈದ್ಯರ ಸಂಘ 1976ರಲ್ಲಿ ಆರಂಭಗೊಂಡಿದ್ದು, ಹಲವಾರು ರಚನಾತ್ಮ ಕಾರ್ಯಗಳಿಂದಾಗಿ ರಾಜ್ಯದ ಗಮನ ಸೆಳೆದಿದೆ. ಗದಗ ಐಎಂಎನಲ್ಲಿ ಚರ್ಚೆಯ ರೂಪುರೇಷೆಗಳು, ಗಂಭೀರ ವಿಷಯಗಳು ಫಲಪ್ರದಗೊಂಡಿವೆ. ಹೋರಾಟದ ಮಾರ್ಗ-ಬೇಡಿಕೆಗಳಿಗೆ, ವೈದ್ಯಕೀಯ ಕಾನೂನು ತಿದ್ದುಪಡಿ ತರಲು ಚಿಂತನೆಗಳಿಗೆ ವೇದಿಕೆಯಾದದ್ದು ಗದುಗಿನ ಐಎಂಎ ಶಾಖೆಯ ವೇದಿಕೆ ಎಂಬುದು ಗಮನಾರ್ಹ. ಗದುಗಿನ ಅನುಭವಿ ಘಟಾನುಘಟಿ ವೈದ್ಯರುಗಳ ಮೂಲಕ ರಾಜ್ಯ ಐಎಂಎಗೆ ಸಾಕಷ್ಟು ಬಲ ಬಂದಿದೆ ಎಂದರು.

ಹಾಗೆಯೇ ಗದುಗಿನ ಮಹಿಳಾ ವೈದ್ಯರು ರಾಜ್ಯ, ರಾಷ್ಟ್ರ ಮಟ್ಟದ ಸಮ್ಮೇಳನ, ಬೃಹತ್ ಕಾರ್ಯಕ್ರಮಗಳಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಂಡಿಸಿದ ಪ್ರಬುದ್ಧ ವಿಷಯಗಳು ಹಿರಿಯ ತಜ್ಞ ವೈದ್ಯರ ಗಮನ ಸೆಳೆದಿವೆ. ರಾಜ್ಯದಲ್ಲಿ ಬೆರಳೆಣಿಕೆಯ ಕ್ರಿಯಾಶೀಲ ಐಎಂಎ ಶಾಖೆಗಳಲ್ಲಿ ಗದಗ ಮುಂಚೂಣಿಯಲ್ಲಿದೆ. ಹಿರಿಯರ ಮಾರ್ಗದರ್ಶನದಲ್ಲಿ ಕಿರಿಯ ವೈದ್ಯರ ತಂಡ ಹಿರಿದಾದ ಸಾಧನೆ ಮಾಡಲಿ. ಯುವ ವೈದ್ಯರು ತಮ್ಮ ವೈದ್ಯಕೀಯ ವೃತ್ತಿಯಲ್ಲಿ ಮನುಷ್ಯತ್ವ, ಮಾನವೀಯತೆ ಹಾಗೂ ವಿನಮ್ರತೆಯಿಂದ ರೋಗಿಗಳ ಸೇವೆ ಮಾಡಲಿ. ಧನಾತ್ಮಕ ಸೇವೆ ಇರಲಿ, ವಿನಃ ಧನ (ಹಣ) ಗಳಿಕೆಯೇ ಮುಖ್ಯವಾಗಬಾರದು. ಉತ್ಕೃಷ್ಟ ಸೇವೆಯಿಂದ ಖ್ಯಾತಿ-ಹಣ ಎರಡೂ ತಾನಾಗಿಯೇ ಬರುವದು ಎಂದರು.




ಅತಿಥಿಯಾಗಿ ಆಗಮಿಸಿದ್ದ ರಾಜ್ಯ ಐಎಂಎ ನಿಯೋಜಿತ ಅಧ್ಯಕ್ಷ ಡಾ. ವ್ಹಿ.ವ್ಹಿ. ಚಿನಿವಾಲರ ಮಾತನಾಡಿ, ರಾಜ್ಯ ಐಎಂಎ ಸಂಘಟನೆಯ ಬಲವರ್ಧನೆಗೆ ಗದುಗಿನ ಸಹಕಾರವನ್ನು ಮರೆಯುವಂತಿಲ್ಲ. ಗದಗ ಜಿಲ್ಲೆಯವರಾದ ಡಾ. ಎನ್.ಎಚ್. ಗೋಡಬೋಲೆ, ಡಾ. ಆರ್.ಆರ್. ಜೋಷಿ, ಡಾ. ಬಿ.ಎಂ. ಆಲೂರ, ಡಾ. ಆರ್.ಎಸ್. ಬಳ್ಳಾರಿ, ಡಾ. ಜಿ.ಬಿ. ಬಿಡಿನಹಾಳ, ಡಾ. ಅನ್ನದಾನಿ ಮೇಟಿ, ಡಾ. ಎಚ್.ಬಿ. ಲಕ್ಕೋಳ ಇವರು ರಾಜ್ಯ ಶಾಖೆಯ ಅಧ್ಯಕ್ಷರಾಗಿ ಸಾಕಷ್ಟು ಸುಧಾರಣೆ ತಂದಿದ್ದಾರೆ. ಹಾಗೆಯೇ ಗದಗ ಶಾಖೆಗೆ ಉತ್ತಮ ಮಾರ್ಗದರ್ಶನ ನೀಡಿ ಉತ್ಕೃಷ್ಠತೆಯನ್ನು ಹೆಚ್ಚಿಸಿದ ಹೆಗ್ಗಳಿಕೆ ಗದುಗಿಗೆ ಸಲ್ಲುವದು ಎಂದರು.

ನೂತನ ಅಧ್ಯಕ್ಷ ಡಾ. ಪವನ ಪಾಟೀಲ ತಮ್ಮ ಅಧಿಕಾರದ ಅವಧಿಯಲ್ಲಿ ಹಮ್ಮಿಕೊಳ್ಳಲಿರುವ ಕಾರ್ಯ ಯೋಜನೆಗಳನ್ನು ವಿವರಿಸಿ, ಸರ್ವರ ಸಹಕಾರ ಕೋರಿದರು. ವೇದಿಕೆಯ ಮೇಲೆ ಗದಗ ಐಎಂಎ ಮಹಿಳಾ ಘಟಕದ ಅಧ್ಯಕ್ಷೆ ಡಾ. ಅನುಪಮಾ ಪವನ ಪಾಟೀಲ, ಕಾರ್ಯದರ್ಶಿ ಡಾ. ಶಿಲ್ಪಾ ಪ್ರಕಾಶ ಕುಷ್ಟಗಿ (ಧಡೂತಿ), ನಿಕಟಪೂರ್ವ ಅಧ್ಯಕ್ಷೆ ಡಾ. ಸೋನಿಯಾ ಕರೂರ, ನಿಕಟಪೂರ್ವ ಕಾರ್ಯದರ್ಶಿ ಡಾ. ರಾಧಿಕಾ ಬಳ್ಳಾರಿ ಉಪಸ್ಥಿತರಿದ್ದರು.

ನಿಕಟಪೂರ್ವ ಕಾರ್ಯದರ್ಶಿ ಡಾ.ಚಂದ್ರಶೇಖರ ಬಳ್ಳಾರಿ ಐಎಂಎ ಪ್ರಾರ್ಥನೆ ಮಾಡಿ ವರದಿ ವಾಚಿಸಿದರು. ಖಜಾಂಚಿ ಡಾ. ಭೀಮಸಿಂಗ್ ಸಮೂರೇಕರ ಅವರಿಂದ ಧ್ವಜ ವಂದನೆ ಜರುಗಿತು. ನಿಕಟಪೂರ್ವ ಅಧ್ಯಕ್ಷ ಡಾ. ಜಿ.ಎಸ್. ಪಲ್ಲೇದ ಸ್ವಾಗತಿಸಿದರು. ಡಾ. ಶಶಿಧರ ರೇಶ್ಮೆ, ಡಾ. ಜಿ.ಬಿ. ಬಿಡಿನಹಾಳ ಪರಿಚಯಿಸಿದರು. ಕಾರ್ಯದರ್ಶಿ ಡಾ. ತುಕಾರಾಮ ಸೋರಿ ನಿರೂಪಿಸಿ ವಂದಿಸಿದರು. ಸಮಾರಂಭದಲ್ಲಿ ಐಎಂಎ ಹಿರಿಯ-ಕಿರಿಯ ವೈದ್ಯರುಗಳು ಪಾಲ್ಗೊಂಡಿದ್ದರು.

ಗದಗ ಐಎಂಎ ಕಳೆದ ವರ್ಷದ ತಂಡ ಒಳ್ಳೆಯ ಕೆಲಸ ಮಾಡಿದೆ. ಅದೇ ರೀತಿಯಾಗಿ ಈ ವರ್ಷದ ತಂಡವೂ ಸಹ ಉತ್ತಮ ಕೆಲಸ ಮಾಡಲಿ ಎಂದರಲ್ಲದೆ, ವೈದ್ಯರು ಐಎಂಎ ಸದಸ್ಯರಾಗುವ ಮೂಲಕ ಸಂಘದ ಹಾಗೂ ಹಲವು ಯೋಜನೆಗಳ ಪ್ರಯೋಜನವನ್ನು ಪಡೆದುಕೊಳ್ಳಬೇಕು. ಜೊತೆಗೆ ಕುಟುಂಬದ ಭದ್ರತೆಗೆ ಇರುವ ಸೌಲಭ್ಯಗಳನ್ನು ಸದುಪಯೋಗ ಮಾಡಿಕೊಳ್ಳಬೇಕೆಂದು ಡಾ. ವೈ.ಸಿ.ಯೋಗಾನಂದ ರೆಡ್ಡಿ ಕರೆ ನೀಡಿದರು.

# ಮಧ್ಯಂತರ ಬೆಳೆ ಪರಿಹಾರ ನೀಡಲು ಮನವಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರಸ್ತುತ ವರ್ಷದಲ್ಲಿ ಮುಂಗಾರು ಬೆಳೆಗಳಾದ ಹೆಸರು, ಉದ್ದು, ಮೆಣಸಿನಕಾಯಿ, ಗೋವಿನಜೋಳ, ಬಿಟಿ ಹತ್ತಿ ಬೆಳೆಗಳು ಸತತ ಮಳೆಯಿಂದಾಗಿ ನಷ್ಟವಾಗಿದೆ. ರೈತ ಬಾಂಧವರು ಆರ್ಥಿಕ ಸಂಕಷ್ಟದಲ್ಲಿದ್ದು, ಈಗಾಗಲೇ ವಿಮಾ ಕಂಪನಿಗೆ ವಿಮಾ ಮೊತ್ತವನ್ನು ಭರಿಸಿದ್ದಾರೆ. ಕೂಡಲೇ ವಿಮಾ ಕಂಪನಿ ಮಧ್ಯಂತರ ಬೆಳೆ ಪರಿಹಾರ ನೀಡಲು ಆಗ್ರಹಿಸಿ ಗದಗ ಜಂಟಿ ಕೃಷಿ ಉಪನಿರ್ದೇಶಕಿ ಜಿ.ಎಸ್. ಸ್ಫೂರ್ತಿ, ಮುಳಗುಂದ ಕಂದಾಯ ಇಲಾಖಾಧಿಕಾರಿ ಎಸ್.ಎಸ್. ಪಟ್ಟೇದ, ಮುಳಗುಂದ ಕೃಷಿ ಅಧಿಕಾರಿ ಎಸ್.ಎಫ್. ಗುರಿಕಾರ ಅವರಿಗೆ ಮುಳಗುಂದ ಹಸಿರು ಸೇನೆ ರೈತ ಸಂಘಟನೆ ಹಾಗೂ ರೈತ ಬಾಂಧವರು ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ದೇವರಾಜ ಸಂಗನಪೇಟಿ, ಪ್ರಸ್ತುತ ವರ್ಷದಲ್ಲಿ ಮುಂಗಾರು ಹಂಗಾಮಿನ ಬೆಳೆಗಳು ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದ್ದು, ರೈತ ಬಾಂಧವರು ನಷ್ಟ ಅನುಭವಿಸುವಚಿತಾಗಿದೆ. ಸರಕಾರ ಕೂಡಲೇ ರೈತರ ನೆರವಿಗೆ ಧಾವಿಸಬೇಕು ಎಂದರು.

ರೈತ ಸಂಘದ ಅಧ್ಯಕ್ಷ ದೇವರಾಜ ಸಂಗನಪೇಟಿ, ಬಸವರಾಜ ಕರಿಗಾರ, ಮುತ್ತಪ್ಪ ಬಳ್ಳಾರಿ, ನಾಗೇಶ ಬಾಳಿಕಾಯಿ, ಮಮ್ಮದಲಿ ಶೇಖ, ಶಂಕ್ರಯ್ಯ ಹಿರೇಮಠ, ಕಿರಣ ಕುಲಕರ್ಣಿ, ದೇವಪ್ಪ ಅಣ್ಣಿಗೇರಿ, ಮಾಹಾಂತೇಶ ಗುಂಜಳ, ಮುತ್ತಪ್ಪ ಪಲ್ಲೇದ, ದೇವಪ್ಪ ದೊಟಿಕಲ್ಲ ಮುಂತಾದವರಿದ್ದರು.

# ಡಾ. ಉಮೇಶ್ ಪುರದವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಸಾವಿರಾರು ಪ್ಯಾರಾಲೈಸಸ್ ರೋಗಿಗಳನ್ನ ಗುಣಮುಖರನ್ನಾಗಿಸುವ ಮೂಲಕ ರಾಜ್ಯ ಮಟ್ಟದಲ್ಲಿ ಹೆಸರುವಾಸಿಯಾದ ಆಯುರ್ವೇದ ತಜ್ಞ ಡಾ. ಉಮೇಶ್ ಪುರದ ಅವರು ಗದಗ ವೈದ್ಯಕೀಯ ಪರಿಸರದ ಆಸ್ತಿ ಎಂದು ಶಿಕ್ಷಣ ತಜ್ಞ ಡಾ. ಬಸವರಾಜ ಧಾರವಾಡ ಅಭಿಪ್ರಾಯಪಟ್ಟರು.

ಇತ್ತೀಚೆಗೆ ಡಾ. ಉಮೇಶ್ ಪುರದ ಅವರು ರಾಜೀವ್ ಗಾಂಧಿ ವೈದ್ಯಕೀಯ ಹಾಗೂ ಸಂಶೋಧನಾ ವಿಶ್ವವಿದ್ಯಾಲಯದಿಂದ ಕೊಡಮಾಡುವ ರಾಜ್ಯಮಟ್ಟದ ಉತ್ತಮ ಉಪನ್ಯಾಸಕ ಪ್ರಶಸ್ತಿಗೆ ಭಾಜನರಾದ ನಿಮಿತ್ತ ಡಾ. ಬಸವರಾಜ್ ಧಾರವಾಡ ದಂಪತಿಗಳು ಪುರದ ಅವರ ನಿವಾಸದಲ್ಲಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಬಸವರಾಜ, ಡಾ. ಪುರದ ಅವರು ಆಯುರ್ವೇದ ಕ್ಷೇತ್ರದಲ್ಲಿ ತಮ್ಮದೇ ಆದ ಹೆಜ್ಜೆ ಗುರುತುಗಳನ್ನು ಮೂಡಿಸುವ ಮೂಲಕ ವಿದ್ಯಾರ್ಥಿಗಳ ಅಚ್ಚುಮೆಚ್ಚಿನ ಉಪನ್ಯಾಸಕರಾಗಿ, ಪ್ರಾಚಾರ್ಯರಾಗಿ ಶೈಕ್ಷಣಿಕ ಹಾಗು ಸಾಮಾಜಿಕ ವಲಯದಲ್ಲಿ ಆತ್ಮೀಯ ಸಜ್ಜನ ಒಡನಾಡಿಯಾಗಿ ಗುರುತಿಸಿಕೊಂಡಿದ್ದಾರೆ. ಸದಾ ಕ್ರಿಯಾಶೀಲರಾಗಿ ಹತ್ತಾರು ಸಮಾಜಮುಖಿ ಕೆಲಸಗಳನ್ನು ಮಾಡುವ ಮೂಲಕ ಸಮಾಜದ ಋಣವನ್ನು ತೀರಿಸುತ್ತಿದ್ದಾರೆ. ಅಪರೂಪದ ವೈದ್ಯರಾಗಿ ಸದಾಕಾಲ ಅಧ್ಯಯನಶೀಲರಾಗಿ ಹತ್ತಾರು ಸಂಶೋಧನೆ ಮಾಡುವ ಮೂಲಕ ಆಯುರ್ವೇದ ಕ್ಷೇತ್ರವನ್ನು ಎತ್ತರ ಮಟ್ಟಕ್ಕೆ ಕೊಂಡೊಯ್ದ ಕೀರ್ತಿ ಇವರದ್ದಾಗಿದೆ. ಇವರ ವೈದ್ಯಕೀಯ ಹಾಗೂ ಸಮಾಜಮುಖಿ ಸೇವೆಗೆ ಇನ್ನೂ ಹಲವಾರು ಪ್ರಶಸ್ತಿ ಪುರಸ್ಕಾರಗಳು ಇವರಿಗೆ ದೊರೆಯಲಿ ಎಂದು ಹಾರೈಸಿದರು.

ಗೌರವ ಸ್ವೀಕರಿಸಿ ಮಾತನಾಡಿದ ಡಾ. ಪುರದ, ನನ್ನೆಲ್ಲಾ ಹಿತೈಷಿಗಳ ಆಶೀರ್ವಾದ, ಹಾರೈಕೆಗಳೇ ನನಗೆ ಇಲ್ಲಿಯವರೆಗೆ ನಿರಂತರವಾಗಿ ಸೇವೆ ಮಾಡಲು ಸಾಧ್ಯವಾಗಿದೆ. ಇದರ ಮಧ್ಯೆ ನನ್ನ ಕೈಲಾದಷ್ಟು ಸಮಾಜದ ಋಣವನ್ನು, ಹರಶಿ ಹಾರೈಸಿದವರ ಉಪಕಾರವನ್ನು ತೀರಿಸುವ ಪ್ರಯತ್ನ ಮಾಡುತ್ತಿದ್ದೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಯಲಕ್ಷ್ಮೀ ಅಣ್ಣಿಗೇರಿ (ಧಾರವಾಡ), ಶ್ರೀಮತಿ ಪುರದ ಮುಂತಾದವರು ಉಪಸ್ಥಿತರಿದ್ದರು.

# ಪ್ರಯಾಣಿಕರಿಗೆ ಉತ್ತಮ ಸೇವೆ ಕಲ್ಪಿಸಿ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ. ಅವರು ಹಾವೇರಿ ಘಟಕ, ವಿಭಾಗೀಯ ಕಾರ್ಯಾಗಾರ ಮತ್ತು ವಿಭಾಗೀಯ ಕಛೇರಿಗೆ ಭೇಟಿ ನೀಡಿ ಪರಿಶೀಲಿಸಿದರು.

ಬ ಸ್ ್ ಸ ಗ ್ ಳ ್ ನ ್ ು ಸುಸ್ಥಿತಿಯುಲ್ಲಿಟ್ಟುಕೊಂಡು ಸಾರ್ವಜನಿಕ ಪ್ರಯಾಣಿಕರಿಗೆ ವಿಶೇಷವಾಗಿ ವಿದ್ಯಾರ್ಥಿಗಳಿಗೆ ಉತ್ತಮ ಸಾರಿಗೆ ಸೇವೆಯನ್ನು ಒದಗಿಸಲು ಕಾರ್ಯ ಯೋಜನೆಗಳನ್ನು ಹಮ್ಮಿಕೊಂಡು, ಬಸ್ಸುಗಳನ್ನು ನಿಗದಿತ ಸಮಯಕ್ಕೆ ಸರಿಯಾಗಿ ಕಾರ್ಯಾಚರಣೆ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.




ಮುಂಬರುವ ದಿನಗಳಲ್ಲಿ ದೀಪಾವಳಿ ಹಬ್ಬ ಇರುವ ಕಾರಣ ಪ್ರಯಾಣಿಕರ ದಟ್ಟಣೆಗನುಗುಣವಾಗಿ ಬಸ್ಸುಗಳನ್ನು ಕಾರ್ಯಾಚರಣೆ ಮಾಡಿ ಪ್ರಯಾಣಿಕರಿಗೆ ಉತ್ತಮ ಸೇವೆ ಕಲ್ಪಿಸಲು ತಿಳಿಸಿ, ಸಿಬ್ಬಂದಿಗಳ ಸಮಸ್ಯೆಗಳನ್ನು ಆಲಿಸಿ ಪರಿಹಾರಕ್ಕೆ ಸೂಚನೆಗಳನ್ನು ನೀಡಿದರು.

ಇದೇ ಸಂದರ್ಭದಲ್ಲಿ ವಿಭಾಗೀಯ ನಿಯಂತ್ರಣಾಧಿಕಾರಿ ಶಶಿಧರ ಕುಂಬಾರ, ವಿಭಾಗೀಯ ಸಾರಿಗೆ ಅಧಿಕಾರಿಗಳಾದ ಅಶೋಕ ಪಾಟೀಲ, ವಿಭಾಗೀಯ ತಾಂತ್ರಿಕ ಶಿಲ್ಪಿಗಳಾದ ಕೆ.ಆರ್. ನಾಯಕ್ ಸೇರಿದಂತೆ ಹಾವೇರಿ ವಿಭಾಗ ಮತ್ತು ಘಟಕದ ಅಧಿಕಾರಿ/ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಜಿಲ್ಲಾ ಪಂಚಾಯತ ಕೆಡಿಪಿ ಸಭೆ ಅ.22ಕ್ಕೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

2024-25ನೇ ಸಾಲಿನ ಸೆಪ್ಟೆಂಬರ್ 2024ರ ಅಂತ್ಯಕ್ಕೆ ಕೊನೆಗೊಂಡಂತೆ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಯೋಜನೆಯಡಿ ಎರಡನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 22ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಆಯೋಜಿಸಲಾಗಿದೆ.



ಎಲ್ಲ ಜಿಲ್ಲಾಮಟ್ಟದ ಅಧಿಕಾರಿಗಳು ಕೆಡಿಪಿ ಸಭೆಗೆ ತಮ್ಮ ಇಲಾಖೆಯ ಪ್ರಗತಿ ವರದಿ ಮತ್ತು ಅನುಪಾಲನಾ ವರದಿಯೊಂದಿಗೆ ನಿಗದಿತ ಸಮಯಕ್ಕೆ ಹಾಜರಾಗಲು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಾ. ಲೀಲಾದೇವಿ ಪ್ರಸಾದ್ ಅಭಿನಂದನಾ ಕಾರ್ಯಕ್ರಮದ ಸಮಾರೋಪದಲ್ಲಿ ಡಾ. ರಾಜೇಂದ್ರ ಗಡಾದ

# ರಾಜ್ಯದ ಅಪರೂಪದ ಮಹಿಳಾ ಸಾಧಕಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕನ್ನಡ ಸಾಂಸ್ಕೃತಿಕ ಪರಿಚಾರಕಿ, ಮಾಜಿ ಸಚಿವೆ ಡಾ. ಲೀಲಾದೇವಿ ಆರ್.ಪ್ರಸಾದ್ ಕರ್ನಾಟಕ ಕಂಡ ಅಪರೂಪದ ಮಹಿಳಾ ಸಾಧಕಿಯರಲ್ಲೊಬ್ಬರು. ರಾಜಕೀಯ ಹಾಗೂ ಸಾಂಸ್ಕೃತಿಕ ಸಾಹಿತ್ಯಗಳೆರಡರಲ್ಲೂ ವೈಶಿಷ್ಟ್ಯ ಮೆರೆದು ಯಶಸ್ಸು ಗಳಿಸಿದವರಾಗಿದ್ದಾರೆ ಎಂದು ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ, ಕವಿ, ವಿಮರ್ಶಕ ಡಾ. ರಾಜೇಂದ್ರ ಎಸ್.ಗಡಾದ ಹೇಳಿದರು.

ಬೆಂಗಳೂರು ನಗರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಬಸವ ಸಮಿತಿ, ಕದಳಿ ಮಹಿಳಾ ವೇದಿಕೆಗಳು ಬೆಂಗಳೂರಿನ ಬಸವಭವನದಲ್ಲಿ ಏರ್ಪಡಿಸಿದ್ದ 'ಶರಣೆ ಡಾ. ಲೀಲಾದೇವಿ ಆರ್.ಪ್ರಸಾದ್-92 ಸಾರ್ಥಕ ಬದುಕಿನ ಸುಂದರ ಪಯಣ' ಅಭಿನಂದನಾ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡುತ್ತಿದ್ದರು.

1957ರಲ್ಲಿಯೇ ಬೆಂಗಳೂರು ಮಹಾನಗರಪಾಲಿಕೆ ಸದಸ್ಯರಾಗಿ ಸಾಮಾಜಿಕ, ರಾಜಕೀಯ ಜೀವನ ಪ್ರಾರಂಭಿಸಿ, ಮುಂದೆ ಶಾಸಕಿಯಾಗಿ, ಸಚಿವೆಯಾಗಿ, ರಾಜ್ಯಸಭಾ ಸದಸ್ಯರಾಗಿ ರಾಜಕೀಯ ಸೇವೆ ಸಲ್ಲಿಸಿದರು. ಸಾರ್ವಜನಿಕ ಸೇವಾ ಕ್ಷೇತ್ರದಲ್ಲಿ, ಅದರಲ್ಲೂ ವಿಶೇಷವಾಗಿ ಸಹಕಾರ ಕ್ಷೇತ್ರ, ಮಹಿಳಾ ಸಂಘಟನೆಯಲ್ಲಿ ಡಾ. ಲೀಲಾದೇವಿಯವರು ವಹಿಸಿರುವ ಪಾತ್ರ ಶ್ಲಾಘನೀಯವಾದದು. ಸಾಹಿತ್ಯ ಲೋಕದಲ್ಲೂ ಗಣನೀಯ ಕೊಡುಗೆ ನೀಡಿರುವ ಅವರು, ಸಾಹಿತ್ಯದ ವಿವಿಧ ಪ್ರಕಾರದ 30ಕ್ಕೂ ಹೆಚ್ಚು ಕೃತಿಗಳನ್ನು ಸಾರಸ್ವತ ಲೋಕಕ್ಕೆ ನೀಡಿದ್ದಾರೆ.




ಅವರ ಸಾಹಿತ್ಯ ಹಾಗೂ ಸಾಂಸ್ಕೃತಿಕ ವಲಯದ ಅನುಪಮ ಸೇವೆಗೆ ವಿಜಯಪುರ ಮಹಿಳಾ ವಿಶ್ವವಿದ್ಯಾಲಯವು ಗೌರವ ಡಾಕ್ಟರೇಟ್ ನೀಡಿದರೆ, ಕರ್ನಾಟಕ ಸರ್ಕಾರವು ರಾಜ್ಯೋತ್ಸವ ಪ್ರಶಸ್ತಿ, ಸಹಕಾರ ರತ್ನ ಪ್ರಶಸ್ತಿ, 'ಅಕ್ಕ' ರಾಜ್ಯ ಪ್ರಶಸ್ತಿಯನ್ನ ನೀಡಿ ಗೌರವಿಸಿವೆ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಬಸವ ಸಮಿತಿಯ ಉಪಾಧ್ಯಕ್ಷ ಪ್ರಭುದೇವ್ ಚಿಗಟೇರಿ ಮಾತನಾಡಿ, ಡಾ. ಲೀಲಾದೇವಿ ಪ್ರಸಾದ್ ಅವರ ಸಾಮಾಜಿಕ ಕಳಕಳಿ, ಸಾಮಾಜಿಕ ಸೇವೆ, ಸಾಹಿತ್ಯ ಸಾಧನೆ ಅನುಪಮವಾದುದು ಎಂದರು.

ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿದ್ದ ಬೇಲಿಮಠ ಸಂಸ್ಥಾನದ ಶ್ರೀ ಮ.ನಿ.ಪ್ರ ಶಿವರುದ್ರ ಮಹಾಸ್ವಾಮಿಗಳು ಮಾತನಾಡಿ, ಹಾಳು ಕೊಂಪೆಯಾಗಿದ್ದ ಉಡುತಡಿಯನ್ನು ರಾಷ್ಟ್ರೀಯ ಮಟ್ಟದ ಪುಣ್ಯಕ್ಷೇತ್ರವನ್ನಾಗಿ ಮಾಡಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ ಎಂದರು. ವೇದಿಕೆಯ ಮೇಲೆ ಡಾ. ಲೀಲಾದೇವಿ ಆರ್.ಪ್ರಸಾದ್, ಉಮಾದೇವಿ ಚಂದ್ರಶೇಖರ್, ಪ್ರಮಿಳಾ ಗರಡಿ, ಮಹಾಲಕ್ಷ್ಮೀ ಉಪಸ್ಥಿತರಿದ್ದರು.

ಕರ್ನಾಟಕ ನಾಟಕ ಅಕಾಡೆಮಿಯ ಅಧ್ಯಕ್ಷ ಕೆ.ವಿ. ನಾಗರಾಜಮೂರ್ತಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಗೀತಾ ಜಯಂತ್ ಸ್ವಾಗತಿಸಿದರು. ಇದೇ ಸಂದರ್ಭದಲ್ಲಿ ಸಾಹಿತಿ ಡಾ. ರಾಜೇಂದ್ರ ಎಸ್ ಗಡಾದ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಖ್ಯಾತ ಲೇಖಕಿಯರಾದ ಡಾ. ಸರಸ್ವತಿ ಚಿಮ್ಮಲಗಿ, ಡಾ. ಹನುಮಾಕ್ಷಿ ಗೋಗಿ, ಡಾ. ನಿರ್ಮಲಾ ಎಲಿಗಾರ, ಮಂಜುಳಾ ಶಿವಾನಂದ, ಹಿರಿಯ ಸಮಾಜ ಸೇವಕಿ ಸುಶೀಲಮ್ಮ, ಕಮಲಾ ಸುದರ್ಶನ್, ದಿಬ್ಬೂರು ಗಿರೀಶ್ ಮುಂತಾದವರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು, ಖ್ಯಾತ ಸಾಹಿತಿಗಳಾದ ಡಾ. ಧರಣಿದೇವಿ ಮಾಲಗತ್ತಿ ಮಾತನಾಡಿ, ನಾಡಿನ ಮಹಿಳೆಯರಿಗೆಲ್ಲ ಬಹುಮುಖ ಪ್ರತಿಭೆಯ ಡಾ. ಲೀಲಾದೇವಿ ಅವರು ಆದರ್ಶನೀಯವಾಗಿದ್ದಾರೆ ಎಂದರು. ಖ್ಯಾತ ಸಾಹಿತಿ ಡಾ. ಎಚ್.ಎಸ್. ಶಿವಪ್ರಕಾಶ್ ಸಮಾರೋಪ ನುಡಿಗಳನ್ನಾಡಿ, ಡಾ. ಲೀಲಾದೇವಿ ಅವರು 93ರ ಇಳಿವಯದಲ್ಲೂ ಕ್ರಿಯಾಶೀಲರಾಗಿ ವಿವಿಧ ಕ್ಷೇತ್ರಗಳಲ್ಲಿ ಕೆಲಸ ಮಾಡುತ್ತಿರುವುದು ನಿಜಕ್ಕೂ ಸೋಜಿಗವಾಗಿದೆ ಎಂದರು.

ಕರ್ನಾಟಕ ಸರ್ಕಾರ

**ಕಾರ್ಯನಿರ್ವಾಹಕ ಇಂಜಿನಿಯರ, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ವಿಭಾಗ, ಗದಗ**

ಕಾ.ಇ: ಗ್ರಾ.ಕು.ನೀ&ನೈ.ವಿ/ಗದಗ/ಕಿ.ಇಂ/ಟೆಂಡರ್/2024-25/1251 ದಿನಾಂಕ:18.10.2024

**ಟೆಂಡರ್ ಪ್ರಕಟಣೆ**

ಪಂಚಾಯತ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ನೋಂದಾಯಿಸಿದ ಗುತ್ತಿಗೆದಾರರಿಂದ ಐಟಂ ದರದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ-2000 ಮತ್ತು ಇತ್ತೀಚಿನ ತಿದ್ದುಪಡಿಗಳಂತೆ, ಕುಡಿಯುವ ನೀರು ಸರಬರಾಜು ಯೋಜನೆ ಅಡಿಯಲ್ಲಿ ಗದಗ ಜಿಲ್ಲೆಯ ಈ ಕೆಳಗಿನ ಕಾಮಗಾರಿಯ ಟೆಂಡರನ್ನು "ಇ-ಪ್ರೊಕ್ಯುರಮೆಂಟ್-2" ಮುಖಾಂತರ ಕರೆಯಲಾಗಿದೆ.

| ಕ್ರ.ಸಂ | ಇಂಡೆಂಟ್ ಸಂಖ್ಯೆ / ಕಾಮಗಾರಿಯ ಹೆಸರು | ಟೆಂಡರಗಿಟ್ಟ ಮೊತ್ತ | ಮುಂಗಡ ಠೇವಣಿ ಮೊತ್ತ |
|---|---|---|---|
| 1 | CONSTRUCTION OF OHT AT SC COLONY IN SHIROL VILLAGE OF NARGUND TALUK IN GADAG DIST. | 21.06 ಲಕ್ಷಗಳು | 42000.00 |

ಈ ಕಾಮಗಾರಿಗಳ ವಿವರಗಳಿಗಾಗಿ ಹಾಗೂ ಡೌನಲೋಡ ಮಾಡಿಕೊಳ್ಳಲು ಗುತ್ತಿಗೆದಾರರು ಕರ್ನಾಟಕ ಸರಕಾರದ "ಇ-ಪ್ರೋಕ್ಯೂರವೆಂಟ್" ವೆಬ್‌ಸೈಟ್ **https://kppp.karnataka.gov.in** ನಲ್ಲಿ ನೋಡಿಕೊಳ್ಳಬಹುದು. ಟೆಂಡರ ಸಲ್ಲಿಸಲು ಪ್ರಾರಂಭವಾಗುವ ದಿನಾಂಕ: **19.10.2024**. ಪ್ರಶ್ನೋತ್ತರದ ಕೊನೆಯ ದಿನಾಂಕ: **22.10.2024**. ಟೆಂಡರ ಸ್ವೀಕರಿಸುವ ಕೊನೆಯ ದಿನಾಂಕ: **26.10.2024**. ತಾಂತ್ರಿಕ ಬಿಡ್ ತೆರೆಯುವ ದಿನಾಂಕ: **28.10.2024** & ಆರ್ಥಿಕ ಬಿಡ್ ತೆರೆಯುವ ದಿನಾಂಕ: **30.10.2024**

ಸಹಿ/-ಕಾರ್ಯನಿರ್ವಾಹಕ ಇಂಜಿನಿಯರರು
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಗದಗ.

ವಾ.ಸಾ.ಇ/ಗದಗ/308/ದೇಶಪಾಂಡೆಪಬ್ಲಿಸಿಟಿ/2024-25

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka